# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 35 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 19–08–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 35 | Title- Code: KARKAN 28269 | Chitradurga | Date: 19-08-2024 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಾಜೂರಿನಲ್ಲ ಮಳೆ ಸಿಡಿಲಿಗೆ ಮೃತಪಟ್ಟ 106 ಕುರಿಗಳು 2

ಕೋಲ್ಕತ್ತ ವೈದ್ಯೆ ಅತ್ಯಾಚಾರ, ಅಮಾನವೀಯ ಹತ್ಯೆ ಖಂಡಿಸಿ ವೈದ್ಯರ ಸಂಘ ಪ್ರತಿಭಟನೆ 3

ಅವೈಜ್ಞಾನಿಕ ರಸ್ತೆ ನಿರ್ಮಾಣ ಸರಿಪಡಿಸಿ; ಅಪಘಾತ ತಗ್ಗಿಸಲು ಕ್ರಮ ವಹಿಸಿ:ಡಿಸಿ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಮಳೆ ವರದಿ: ಜಿಲ್ಲೆಯಲ್ಲಿ 21.9 ಮಿ.ಮೀ ಮಳೆ

» ಚಿತ್ರದುರ್ಗ

ಶುಕ್ರವಾರ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ 21.9 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 32.1 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 19.8 ಹಿರಿಯೂರು ತಾಲ್ಲೂಕು 21.8 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 13.5 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 21.9 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 9.5 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 26.2 ಮಿ.ಮೀ, ನಾಯಕನಹಟ್ಟಿ 35.7 ಮಿ.ಮೀ, ಪರಶುರಾಂಪುರ 44.3 ಮಿ.ಮೀ, ತಳಕು 23.1 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 32.2 ಮಿ.ಮೀ, ಭರಮಸಾಗರ 10.4 ಮಿ.ಮೀ, ಹಿರೇಗುಂಟನೂರು 16.3 ಮಿ.ಮೀ, ತುರುವನೂರು 11.1 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 16.8 ಮಿ.ಮೀ, ಐಮಂಗಲ 18.9 ಮಿ.ಮೀ, ಧರ್ಮಪುರ 36.9 ಮಿ.ಮೀ, ಜೆ.ಜೆ.ಹಳ್ಳಿ 13.7 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 13.8 ಮಿ.ಮೀ, ಬಿ.ದುರ್ಗ 2.7 ಮಿ.ಮೀ, ರಾಮಗಿರಿ 10.6 ಮಿ.ಮೀ, ತಾಳ್ಯ 23.1 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 12.1 ಮಿ.ಮೀ, ಮಾಡದಕೆರೆ 12.6 ಮಿ.ಮೀ, ಮತ್ತೋಡು 37.9 ಮಿ.ಮೀ, ಶ್ರೀರಾಂಪುರ 34 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮುರುನಲ್ಲಿ 3.2 ಮಿ.ಮೀ ಹಾಗೂ ದೇಮಸಮುದ್ರದಲ್ಲಿ 16.5 ಮಿ.ಮೀ ಮಳೆಯಾಗಿದೆ.

**44 ಮನೆಗಳು ಭಾಗಶಃ ಹಾನಿ:** ಶುಕ್ರವಾರ ಸುರಿದ ಮಳೆಗೆ ಜಿಲ್ಲೆಯಾದ್ಯಂತ ಒಟ್ಟು 44 ಮನೆಗಳು ಭಾಗಶಃ ಹಾನಿಯಾಗಿವೆ. 20 ಮನೆಗಳಿಗೆ ನೀರು ನುಗ್ಗಿರುವ ಪ್ರಕರಣಗಳು ವರದಿಯಾಗಿದ್ದು, 106 ಸಣ್ಣ ಜಾನುವಾರುಗಳು ಮೃತಪಟ್ಟಿವೆ. 2 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾಗೂ 612.4 ಹೆಕ್ಟೇರ್ ಕೃಷಿ ಬೆಳೆಹಾನಿಯಾಗಿದೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 22 ಮನೆಗಳು ಭಾಗಶಃ ಹಾನಿ ಹಾಗೂ 20 ಮನಗಳಿಗೆ ನೀರು ನುಗ್ಗಿದ್ದು, 610 ಹೆಕ್ಟೇರ್ ಕೃಷಿ ಬೆಳೆಹಾನಿಯಾಗಿದೆ. ಚಳ್ಳಕೆರೆ ತಾಲ್ಲೂಕಿನಲ್ಲಿ 18 ಮನೆಗಳು ಭಾಗಶಃ ಹಾನಿ, 106 ಸಣ್ಣ ಜಾನುವಾರು ಮೃತಪಟ್ಟಿವೆ ಹಾಗೂ 2 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾಗೂ 2 ಹೆಕ್ಟೇರ್ ಕೃಷಿ ಬೆಳೆಹಾನಿಯಾಗಿದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 1 ಮನೆ ಭಾಗಶಃ ಹಾನಿಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ 2 ಮನೆಗಳು ಭಾಗಶಃ ಹಾನಿಯಾಗಿದ್ದು, 0.40 ಹೆಕ್ಟೇರ್ ಕೃಷಿ ಬೆಳೆಹಾನಿಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 1 ಮನೆ ಭಾಗಶಃ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ತಿಳಿಸಿದೆ.

### ಬಹಿರಂಗ ಹರಾಜು

» ದಾವಣಗೆರೆ

ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ಕಚೇರಿ ವಾಹನ ಬುಲೆರೊ ಎಲ್‌ಎಕ್ಸ್ ಜೀಪ್ ಮಾಡಲ್ 2012 ನಿಷ್ಕ್ರೀಯವಾಗಿದ್ದು ಈ ವಾಹನವನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ನಂ.337/16ಎ–16 ಗಣೇಶ್ ಲೇಔಟ್ 1ನೇ ಕ್ರಾಸ್ ಪಿ.ಬಿ.ರಸ್ತೆ ದಾವಣಗೆರೆ ಇಲ್ಲಿ ಅಥವಾ ದೂ.ಸಂ.8050854033 ಗೆ ಸಂರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

### ಅನಾಮಧೇಯ ಶವ ಪತ್ತೆ

» ದಾವಣಗೆರೆ

ಹರಿಹರ ನಗರದ ಹಳೆ ಹರ್ಲಾಪುರ ಪಕ್ಕದಲ್ಲಿರುವ ಗೌಡ್ರ ಹಾಲಪ್ಪನವರ ಜಮೀನಿನ ಪಕ್ಕದಲ್ಲಿರುವ ತುಂಗಾಭದ್ರ ನದಿಯ ದಡದಲ್ಲಿ ರುಂಡ, ಭುಜದಿಂದ ಎರಡೂ ಕೈಗಳೂ ಹಾಗೂ ಎರಡೂ ಕಾಲು ಪಾದಗಳು ಇಲ್ಲದ ಸಮಾರು 40 ರಿಂದ 45 ವರ್ಷದ ಮೃತ ದೇಹವು ಬೆಳಿಗ್ಗೆ 11.45 ಗಂಟೆಗೆ ಪತ್ತೆಯಾಗಿರುತ್ತದೆ. ಮೃತನ ಬಗ್ಗೆ ಮಾಹಿತಿ ಇರುವುದಿಲ್ಲ.

### ಆಯುರ್ವೇದ ಚಿಕಿತ್ಸೆಯಿಂದ ರೋಗಿಗೆ ಯಾವುದೇ ಪ್ರಾಣಾಪಾಯ ಉಂಟಾಗದು: ಶಾಸಕ ಟಿ.ರಘುಮೂರ್ತಿ

# ಪಾರಂಪರಿಕ ಆಯುರ್ವೇದ ಪದ್ದತಿ ನಮ್ಮೆಲ್ಲರಿಗೂ ಆರೋಗ್ಯ ರಕ್ಷಾ ಕವಚ

» ಚಳ್ಳಕೆರೆ

ಕಳೆದ ನೂರಾರು ವರ್ಷಗಳಿಂದ ಪ್ರತಿಯೊಬ್ಬ ವ್ಯಕ್ತಿಯ ಆರೋಗ್ಯವನ್ನು ಸುಸ್ಥಿತಿಯಲ್ಲಿಟ್ಟು ಉತ್ತಮ ಜೀವನ ನಡೆಸುವ ವಾತಾವಣವನ್ನು ನಿರ್ಮಾಣ ಮಾಡಿರುವುದೇ ಆಯುರ್ವೇದ ಚಿಕಿತ್ಸೆ. ಇಂದಿಗೂ ಸಹ ಆಧುನಿಕ ಚಿಕಿತ್ಸಾ ಕ್ರಮಗಳಿಗೆ ಸವಾಲುಒಡ್ಡುವ ರೀತಿಯಲ್ಲಿ ಆಯುರ್ವೇದ ಚಿಕಿತ್ಸೆ ಫಲಕಾರಿಯಾಗಿ ಕಾರ್ಯನಿರ್ವಹಿಸುವ ಸಾಮರ್ಥ್ಯ ಹೊಂದಿದೆ ಎಂದು ಶಾಸಕ, ಸಣ್ಣ ಕೈಗಾರಿಕೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ನಗರ ಬೆಂಗಳೂರು ರಸ್ತೆಯ ನಿರ್ಮಲ ಕನ್ವೆನ್ಷನ್ ಹಾಲ್‌ನಲ್ಲಿ ಪಾರಂಪರಿಕ ಆಯುರ್ವೇದ ಪ್ರಥಮ ಚಿಕಿತ್ಸಾ ವೈದ್ಯರ ಸಂಘ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ನಾವು ಎಲ್ಲೇಹೋದರೂ ಸರ್ಕಾರಿ ಹಾಗೂ ಸಾರ್ವಜನಿಕ ಆಸ್ಪತ್ರೆಗಳನ್ನು ಸಾಕಷ್ಟು ಸಂಖ್ಯೆಯ ಕಾಣಬಹುದು. ನಮ್ಮೆಲ್ಲ ಚಿಕಿತ್ಸೆಗೆ ನಾವು ಆಸ್ಪತ್ರೆಯನ್ನು ಅವಲಂಬಿಸಿದ್ದೇವೆ. ಪ್ರತಿಯೊಂದು ಆಸ್ಪತ್ರೆಯಲ್ಲೂ ನೂತನ



ತಾಂತ್ರಿಕತೆಯಿಂದ ಕೂಡಿದ ಔಷಧಗಳನ್ನು ವಿತರಿಸುತ್ತಾರೆ. ಇವುಗಳನ್ನು ಪಡೆದ ರೋಗಿ ತಾತ್ಕಾಲಿಕವಾಗಿ ಗುಣಮುಖನಾದರೂ ಸಂಪೂರ್ಣಗುಣವುುಖನಾಗಲು ಕೆಲವೊಂದು ಸಮಯವಿಡಿಯುತ್ತದೆ. ಆದರೆ, ಆಯುರ್ವೇದ ಚಿಕಿತ್ಸೆ ಪಡೆದವರು ಕೇವಲ ಕೆಲವೇ ಗಂಟೆಯಲ್ಲೆ ಚೇತರಿಕೆ ಮಾಡಿಕೊಳ್ಳುತ್ತಾರೆ. ಇಂದಿನ ಆಯುರ್ವೇದ ಚಿಕಿತ್ಸಾ ಪದ್ದತಿಯಲ್ಲಿ ಅಮೂಲಾಗ್ರ ಬದಲಾವಣೆಯನ್ನು ತರಲಾಗಿದೆ. ಆಸ್ಪತ್ರೆಗಳೇ ಅಸ್ಥಿತ್ವದಲ್ಲಿ ಇರದ ಸಂದರ್ಭದಲ್ಲಿ ನಮ್ಮ ಬದುಕಿಗೆ ಸ್ಪೂರ್ತಿ ಹಾಗೂ ಶಕ್ತಿ ತುಂಬಿದ್ದು ಆಯುರ್ವೇದ ಚಿಕಿತ್ಸೆ ಆದ್ದರಿಂದ ಆಯುರ್ವೇದ ಚಿಕಿತ್ಸೆಯ ಬಗ್ಗೆ ಉದಾಸೀನ ಸಲ್ಲದು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಿರುಮಲ ನರ್ಸಿಂಗ್‌ಹೋಂ ಡಾ.ವಿ.ಶ್ರೀನಿವಾಸ್, ಆಯುರ್ವೇದ ಚಿಕಿತ್ಸೆಯ ಬಗ್ಗೆ ಚಿಂತನ, ಮಂಥನ ಮಾಡುವ ಸಮಯ ಒದಗಿ ಬಂದಿರುವುದು ಸಂತೋಷತಂದಿದೆ. ಯಾವುದೇ ರೋಗಿ ತನ್ನ ರೋಗದಿಂದ ವಿಮುಕ್ತನಾಗಲು ನೂತನ ಪದ್ದತಿಯಲ್ಲಿ ಔಷಧ ಪಡೆಯಲು ಬಯಸುತ್ತಾನೆ. ಆಯುರ್ವೇದ ಬಗ್ಗೆ ಹೆಚ್ಚು ಆಸಕ್ತಿ ಯಾರೂ ತೋರುತ್ತಿಲ್ಲ. ಆದರೆ, ನೈಜ್ಯವಾಗಿ ಹೇಳುವುದಾದರೆ ಆಯುರ್ವೇದ ಚಿಕಿತ್ಸೆಯಲ್ಲಿರುವ ಸುಲಭ ಮಾರ್ಗಗಳು ಬೇರೆ ಎಲ್ಲಾ ಕಾಣಸಿಗದು. ನಮ್ಮ ಪೂರ್ವಜನರು ಆರೋಗ್ಯ ಭಾಗ್ಯವನ್ನು ಪಡೆದಿದ್ದು, ಆಯುರ್ವೇದ ಔಷಧಿಯಿಂದ ಎಂದರು. ಸಂಘದ ಅಧ್ಯಕ್ಷ ಜಿ.ಬಾಬುರೆಡ್ಡಿ ಮಾತನಾಡಿ, ಆಯುರ್ವೇದ ಚಿಕಿತ್ಸೆಯ ಬಗ್ಗೆ ಎಲ್ಲರಲ್ಲೂ ಹೆಚ್ಚು ಉತ್ಸಾಹ ಇರುವುದು ಇಂದಿನ ಸಭೆಯಲ್ಲಿ ಕಂಡು ಬಂದಿದೆ. ಶಾಸಕರೂ ಸಹ ಆಯುರ್ವೇದ ಚಿಕಿತ್ಸೆಯ ಬಗ್ಗೆ ಸಾಕಷ್ಟು ಮಾಹಿತಿ ನೀಡಿದ್ದಾರೆ. ತಾಲ್ಲೂಕಿನಲ್ಲಿ ಅವರ ಮಾರ್ಗದರ್ಶನದಲ್ಲಿ ಚಿಕಿತ್ಸಾ ಕ್ರಮಗಳು ಮುಂದುವರೆಯುತ್ತವೆ ಎಂದರು. ಕಾರ್ಯಕ್ರಮದಲ್ಲಿ ಡಾ.ಬಿ.ವಿ.ಶರತ್, ಡಾ.ಡಿ.ಟಿ.ಶ್ರೀನಿವಾಸ್, ಕೆ.ಸಿದ್ದಾರೆಡ್ಡಿ, ವಿ.ರಂಗಾರೆಡ್ಡಿ, ಕೆ.ರವಿಕುಮಾರ್, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಡಿ.ಟಿ.ಶ್ರೀನಿವಾಸ್, ನಗರಸಭಾ ಸದಸ್ಯ ಕೆ.ವೀರಭದ್ರಪ್ಪ ಮುಂತಾದವರು ಉಪಸ್ಥಿತರಿದ್ದರು.

## ಕಾನೂನು ಮೂಲಕ ಸಿಎಂ ಹೋರಾಟ ಮಾಡಲಿ

» ಚಿತ್ರದುರ್ಗ

ಗವರ್ನರ್ ಪ್ರಾಸಿಕ್ಯೂಷನ್‌ಗೆ ಏಕೆ ಕೊಟ್ಟರೆಂದು ಕೇಳುವ ಅಧಿಕಾರ ಇಲ್ಲ.. ಕಾನೂನು ಮೂಲಕ ಸಿದ್ದರಾಮಯ್ಯರವರು ಹೋರಾಟ ಮಾಡಲಿ. ಅಲ್ಲಿಯವರೆಗ ಸಿದ್ದರಾಮಯ್ಯರವರು ತಮ್ಮ ಸ್ಥಾನಕ್ಕೆ ರಾಜೀನಾಮೆಯನ್ನು ನೀಡಿ ಆರೋಪ ಸುಳ್ಳು ಎಂದು ಸಾಬೀತಾದಾಗ ಮತ್ತೊಮ್ಮೆ ಮುಖ್ಯಮಂತ್ರಿಯಾಗಲಿ ಎಂದು ವಿಧಾನ ಪರಿಷತ್‌ನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಸಿ.ಎಂ.ಗೆ ಸವಾಲ್ ಹಾಕಿದ್ದಾರೆ.

ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿ ವಿಚಾರಕ್ಕೆ ಪ್ರತಿಕ್ರಿಯಿಸಿ ಕಾಂಗ್ರೆಸ್ ಪಕ್ಷ ಪ್ರತಿಭಟನೆ ಮಾಡುತ್ತಿರುವುದು ಸರಿಯಲ್ಲ. ಬಿ.ಎಸ್.ವೈ ವಿಚಾರದಲ್ಲಿ ಅಂದು ಕಾಂಗ್ರೆಸ್



ಸ್ವಾಗತಿಸಿತ್ತು.ಈಗ ರಾಜ್ಯಪಾಲರ ನಿರ್ಧಾರ ವಿರೋಧಿಸುವ ಬದಲು ಸ್ವಾಗತಿಸಬೇಕಿತ್ತು. ಸಿದ್ದರಾಮಯ್ಯರವರ ಬಳಿ ದೇಶಪ್ರೇಮವಿದೆ ಈ ಆರೋಪವನ್ನು ಒಪ್ಪಿಕೊಂಡಿದ್ದರೆ ಭ್ರಷ್ಟಾಚಾರ ವಿರೋಧಿಗಳೆನ್ನಬಹುದಿತ್ತುಈರೀತಿಪ್ರತಿಭಟಿಸಿದರೆ ಭ್ರಷ್ಟಾಚಾರಕ್ಕೆ ಅವಕಾಶ ಕೊಡಿ ಎಂದಾಗುತ್ತದೆ. ಸಿಎಂ ಸಿದ್ಧರಾಮಯ್ಯರವರ ಭ್ರಷ್ಟಾಚಾರ ಈಗ ಬಯಲಾಗಿದೆ...ಎಷ್ಟೇ ಮುಚ್ಚಿದರೂ ಸಿಎಂ ಭ್ರಷ್ಟಾಚಾರ ಬಯಲಾಗಿದೆ. ಎಂದರು. 187 ಕೋಟಿ ರೂ ಎಸ್.ಟಿ ಸಮುದಾಯದ ಹಣ ಕಬಳಿಕೆ ಮಾಡಿ ಚುನಾವಣೆಗೆ, ಲ್ಯಾಂಬರ್ ಗಿನಿ ಕಾರ್ ಖರೀದಿಗೆ ಹಣ ಬಳಕೆ ಮಾಡಿದ್ದಾರೆ.ವೈನ್ ಶಾಪ್ ಖಾತೆಗೆ, ಚಿನ್ನ ಖರೀದಿ ಮಾಡಿದ್ದಾರೆ,

ಪುಟ ↘ 3

## ರಾಜ್ಯಪಾಲರ ವಿರುದ್ಧ ಟೈರ್ ಸುಟ್ಟು ಜಿಲ್ಲಾ ಕಾಂಗ್ರೆಸ್‌ನಿಂದ ಪ್ರತಿಭಟನೆ




**ಚಿತ್ರದುರ್ಗ:** ಮಹತ್ವದ ಬೆಳವಣಿಗೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಅಕ್ರಮ ನಿವೇಶನ ಪಡೆದ ಆರೋಪಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ತನಿಖೆ ನಡೆಸಲು ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿರುವ ವಿರುದ್ಧ ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಪಕ್ಷದ ವತಿಯಿಂದ ರಾಜ್ಯಪಾಲರ ವಿರುದ್ಧ "ಗೋ ಬ್ಯಾಕ್" ರಾಜ್ಯಪಾಲ ಎಂದು ರಾಜ್ಯಪಾಲರ ವಿರುದ್ಧ ಅಕ್ರೋಶ ಹೊರ ಹಾಕಿದರು.ಜಿಲ್ಲಾಧಿಕಾರಿ ವೃತ್ತದಲ್ಲಿ ಟೈರ್‌ಗೆ ಬೆಂಕಿ ಹಚ್ಚಲು ಯತ್ನಿಸಿದಾಗ ಪೋಲಿಸರು ತಡೆಯಲು ಮುಂದಾದರು.

ಪುಟ ↘ 3

**ಪ್ರಮುಖ ಸುದ್ದಿ**

# ಸಿಎಂ ವಿರುದ್ಧ ಪ್ರಾಸಿಕ್ಯೂಶನ್‌ಗೆ ಅನುಮತಿ: ಕಾಂಗ್ರೆಸ್ ಖಂಡನೆ

» ಚಿತ್ರದುರ್ಗ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಅಕ್ರಮ ನಿವೇಶನ ಪಡೆದ ಆರೋಪಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ತನಿಖೆ ನಡೆಸಲು ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿರುವುದನ್ನು ಕಾಂಗ್ರೆಸ್ ತೀವ್ರವಾಗಿ ಖಂಡಿಸಿದ್ದು, ಇದು ಬಿಜೆಪಿಯವರ ಕುತಂತ್ರ ಎಂದು ಮಾಜಿ ಸಚಿವ, ಕೆಪಿಸಿಸಿ ಉಪಾಧ್ಯಕ್ಷ ಹೆಚ್.ಅಂಜನೇಯ ದೂರಿದ್ದಾರೆ.

ಚಿತ್ರದುರ್ಗ ನಗರದ ಡಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಹಿಂದುಳಿದ ವರ್ಗಗಳ ನಾಯಕ ಸಿದ್ದರಾಮಯ್ಯ ಅವರನ್ನು ತುಳಿಯಲು ಕೇಂದ್ರದ ಎನ್‌ಡಿಎ ಸರ್ಕಾರ ಯತ್ನಿಸುತ್ತಿದೆ. ರಾಜ್ಯದಲ್ಲಿ ರಾಜ ಭವನವನ್ನು ರಾಜ್ಯಪಾಲರು ಬಿಜೆಪಿ ಕಚೇರಿ ಮಾಡಿಕೊಂಡಿದ್ದಾರೆ ಎಂದು ಕಿಡಿಕಾರಿದರು. ಗವರ್ನರ್ ಅವರು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅಸ್ಥಿರಗೊಳಿಸಲು ಯತ್ನಿಸುತ್ತಿದ್ದಾರೆ. ರಾಜ್ಯಪಾಲರುಕೇಂದ್ರಸರ್ಕಾರದಕೈಗೊಂಬೆ ಆಗಿರುವುದು ಸಂವಿಧಾನದ ಕಗ್ಗೊಲೆ.




ಒಬ್ಬ ಹಿಂದುಳಿದ ವರ್ಗದ ನಾಯಕ ಜನಪರ ಆಡಳಿತ ನಡೆಸುತ್ತಿ ರುವುದನ್ನು ಅರಗಿಸಿಕೊಳ್ಳಲಾಗದೆ ಕೇಂದ್ರ ಬಿಜೆಪಿ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಭವನವನ್ನು ಉಪಯೋಗಿಸಿಕೊಂಡಿರುವುದು ಪ್ರಜಾಪ್ರಭುತ್ವದ ಕಗ್ಗೊಲೆ ಎಂದರು.

ಕೇಂದ್ರ ಸರ್ಕಾರವು ಸಂವಿಧಾನಿಕ ಸಂಸ್ಥೆಗಳಾದ ಐಟಿ, ಇಡಿ, ಸಿಬಿಐ ಮತ್ತು ರಾಜಭವನವನ್ನು ದುರ್ಬಳಕೆ ಮಾಡಿಕೊಂಡು ಸಂವಿಧಾನ ಬಾಹಿರ ಕೃತ್ಯದಲ್ಲಿ ತೊಡಗಿರುತ್ತದೆ. ರಾಜ್ಯಪಾಲರ ಮುಂದೆ ಪ್ರಾಸುಕ್ಯೂಷನ್‌ಗಾಗಿ ನೂರಾರು ದೂರುಗಳು ಬಾಕಿ ಇದ್ದರು, ಮುಖ್ಯಮಂತ್ರಿಗಳ ವಿರುದ್ಧ ತರಾತುರಿಯಲ್ಲಿ ಅನು ಮತಿ ನೀಡಿರುವುದು ಸಂವಿಧಾನ ಬಾಹಿರ ಎಂದು ದೂರಿದ ಅವರು ಕೇಂದ್ರ ಸರ್ಕಾರ ಮತ್ತು ರಾಜ್ಯಪಾಲರು ಕರ್ನಾಟಕ ಸರ್ಕಾರವನ್ನು ಅಸ್ಥಿರಗೊಳಿಸುತ್ತಿರುವ ಅಂಶವು ಮೇಲ್ನೋಟಕ್ಕೆ ಕಾಣುತ್ತಿರುವುದರಿಂದ ಈ ಹಿಂದೆಯು ಸಹ ಕೇಂದ್ರ ಸರ್ಕಾರವು ಸಂವಿಧಾನಿಕ ಸಂಸ್ಥೆಗಳನ್ನು ದುರುಪಯೋಗ ಪಡಿಸಿಕೊಂಡು ಕೆಲ ಸರ್ಕಾರಗಳನ್ನು ಅಸ್ಥಿರಗೊಳಿಸಿ ರುವುದು ಇತಿಹಾಸದ ಪುಟಗಳಿಂದ ತಿಳಿಯಬಹುದು ಎಂದರು.

ರಾಜ್ಯಪಾಲರು ತಮ್ಮ ಕರ್ತವ್ಯದಲ್ಲಿ ಯಾರದೂ ಕೈಗೊಂಬೆಯಾಗಿ ಕೆಲಸವನ್ನು ಮಾಡುತ್ತಿದ್ದಾರೆ. ಇದರ ವಿರುದ್ಧ ರಾಜ್ಯದಲ್ಲಿ ಪ್ರತಿಭಟನೆಗಳು ನಡೆಯುತ್ತಿವೆ, ಜನತೆಯೂ ಸಹಾ ಸಹಕಾರ ನೀಡಿದ್ದಾರೆ, ಕೇಂದ್ರ ಸರ್ಕಾರ ರಾಜ್ಯಪಾಲರನ್ನು ವಾಪಸ್ ಕರೆಯಿಸಿಕೊಳ್ಳಬೇಕು ರಾಜ್ಯಪಾಲರು ಸಿ.ಎಂ.ಗೆ ನೀಡಿರುವ ಅನುಮತಿಯನ್ನು ವಾಪಸ್ ಪಡೆಯಬೇಕೆಂದು ಅಂಜನೇಯ ಆಗ್ರಹಿಸಿದರು. ಡಿಸಿಸಿ ಜಿಲ್ಲಾಧ್ಯಕ್ಷರಾಧ ತಾಜ್ ಪೀರ್ ಮಾತನಾಡಿ, ಸಿದ್ದರಾಮಯ್ಯ ರವರ ಮೇಲೆ ಬಂದಿರುವ ಆರೋಪದ ವಿರುದ್ಧ ಆ. 19ರ ನಾಳೆ ಜಿಲ್ಲೆಯಲ್ಲಿ ಪ್ರತಿಭಟನೆಯನ್ನು ನಡೆಸಲಾಗುವುದು, ಅಂದು ಬೆಳಿಗ್ಗೆ 11 ಗಂಟಟೆಯಿಂದ ನಗರದ ನೀಲಕಂಠೇಶ್ವರ ದೇವಾಲಯದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದು ತದ ನಂತರ ರಾಜ್ಯಪಾಲರನ್ನು ವಜಾ ಮಾಡುವಂತೆ ಆಗ್ರಹಿಸಿ ಜಿಲ್ಲಾಧಿಕಾರಿಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಮಾಡಲಾಗುವುದೆಂದರು. ಗೋಷ್ಠಿಯಲ್ಲಿ ಮಾಜಿ ಸಂಸದರಾದ ಬಿ.ಎನ್.ಚಂದ್ರಪ್ಪ, ಪಂಚ ಗ್ಯಾರೆಂಟಿಗಳ ಪ್ರಾಧಿಕಾರ ಜಿಲ್ಲಾಧ್ಯಕ್ಷ ಆರ್.ಶಿವಣ್ಣ,ಪ್ರಧಾನಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಮೈಲಾರಪ್ಪ, ಜಿ.ಪಂ. ಮಾಜಿ ಸದಸ್ಯರಾದ ನರಸಿಂಹರಾಜು, ಪ್ರಕಾಶ್ ಮೂರ್ತಿ, ಗಂಗಾಧರ್, ಮಹಡಿ ಶಿವಮೂರ್ತಿ ಶ್ರೀಮತಿ ಆರತಿ ಸೇರಿದಂತೆ ಇತರರೂ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಅರೆಅಲೆಮಾರಿ ಅಭಿವೃದ್ಧಿ ನಿಗಮ: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಹಿಂದುಳಿದ ವರ್ಗಗಳ ಪ್ರವರ್ಗ-1ರ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದವರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಬಯಸುವವರಿಗೆ ಅನುಕೂಲವಾಗುವಂತೆ 2024-25ನೇ ಸಾಲಿನಲ್ಲಿ ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದಡಿಯಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಯೋಜನೆಗಳಲ್ಲಿ ಸೌಲಭ್ಯ ಒದಗಿಸಲು ಸೇವಾ ಸಿಂಧು ತಂತ್ರಾಂಶದಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್‌ಕಾರ್ಡ್‌ನಲ್ಲಿರುವಂತೆಅರ್ಜಿದಾರರಹೆಸರು, ಇತರೆ ದಾಖಲೆಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಗಳಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24ನೇ ಸಾಲಿಗೆ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ಸೈಟ್ www.kaad.karnataka.gov.in ಅಥವಾ ಸಹಾಯವಾಣಿ ಸಂಖ್ಯೆ 080-22374832, ಮತ್ತು 8050770004, 8050770005 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

### ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ: ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಪ್ರವರ್ಗ-3ಬಿಗೆ ಸೇರಿದ ಮರಾಠ ಮತ್ತು ಇದರ ಉಪಜಾತಿಗೆ ಸೇರಿದ ಜನಾಂಗದವರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿಯಲ್ಲಿ ಸಾಲ ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಈ ನಿಗಮದಡಿಯಲ್ಲಿ ಅನುಷ್ಠಾನಗೊಳಿಸುತ್ತಿರುವ ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ (ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ), ಜೀಜಾವು ಜಲಭಾಗ್ಯ ಯೋಜನೆ (ಗಂಗಾ ಕಲ್ಯಾಣ ನೀರಾವರಿ ಯೋಜನೆ), ಅರಿವು ಶೈಕ್ಷಣಿಕ ಸಾಲ ಯೋಜನೆ, ರಾಜಶ್ರೀ ಶಾಹುಮಹಾರಾಜ ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ) ಸ್ವಾವಲಂಬಿ ಸಾರಥಿ ಯೋಜನೆ ಹಾಗೂ ಸ್ವಾತಂತ್ರ್ಯ ಅಮೃತ್ ಮಹೋತ್ಸವ ಮುನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹತೆಗಳು: ಈ ಯೋಜನೆಗಳಡಿಯಲ್ಲಿ ಅರ್ಜಿ ಸಲ್ಲಿಸಬಯಸುವವರು ಪ್ರವರ್ಗ-3-ಬಿ ಅಡಿಯಲ್ಲಿ 2(ಎ) ಇಂದ 2(ಎಫ್)ವರೆಗೆ ಬರುವ ಸಮುದಾಯಕ್ಕೆ ಸೇರಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ-3(ಬಿ)ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರ ಚಾಲ್ತಿಯಲ್ಲಿರಬೇಕು). ಅರ್ಜಿದಾರನು ಕರ್ನಾಟಕದ ರಾಜ್ಯದವರಾಗಿರಬೇಕು ಹಾಗೂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು. ಸರ್ಕಾರಿ ಸೌಲಭ್ಯವನ್ನು (ಸಾಲ ಸಹಾಯಧನ) ಪಡೆಯುವ ಸಂಬಂಧ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. ನಿಗಮವು ಆಯ್ಕೆ ಮಾಡುವಾಗ ಶೇ.33 ಮಹಿಳೆಯರಿಗೆ, ಶೇ.5ರಷ್ಟು ವಿಕಲಚೇತನರಿಗೆ ಹಾಗೂ ಶೇ.1ರಷ್ಟು ತೃತೀಯ ಲಿಂಗಿಗಳಿಗೆ ಮೀಸಲಿರಿಸಲಾಗಿದೆ. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. (ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಇಬ್ಬರಿಗೆ ಅವಕಾಶವಿರುತ್ತದೆ). ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ ಸಂಖ್ಯೆ 8867537799, ದೂರವಾಣಿ ಸಂಖ್ಯೆ 080-29903994 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರ ಕಚೇರಿ ವಿಳಾಸವನ್ನು ಹಾಗೂ ಹೆಚ್ಚಿನ ವಿವರಗಳನ್ನು https://kmcdc.karnataka.gov.in ನಲ್ಲಿ ತಿಳಿಯಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

**ಜಲ ಸಂರಕ್ಷಣೆ ಕಾಮಗಾರಿಗಳ ವೀಕ್ಷಣೆ: ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್**

# ಆ.21 ರಿಂದ ಕೇಂದ್ರ ತಂಡ ಜಿಲ್ಲೆಗೆ ಭೇಟಿ

» **ಚಿತ್ರದುರ್ಗ**



ಕೇಂದ್ರ ಸರ್ಕಾರದಿಂದ ನೇಮಕವಾಗಿರುವ ತಂಡವು ಇದೇ ಆಗಸ್ಟ್ 21 ರಿಂದ 23 ರವರೆಗೆ ಚಿತ್ರದುರ್ಗ ಜಿಲ್ಲೆಗೆ ಭೇಟಿ ನೀಡಲಿದೆ. ಈ ಸಂದರ್ಭದಲ್ಲಿ ಜಲ ಸಂರಕ್ಷಣೆಗಾಗಿ ಜಿಲ್ಲೆಯಲ್ಲಿ ಕೈಗೊಂಡ ಕಾಮಗಾರಿಗಳ ವೀಕ್ಷಣೆ ನಡೆಸಲಿದೆ ಎಂದು ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು.

ಈ ಕುರಿತು ನಗರದ ಜಿಲ್ಲಾ ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.

'ನಾರಿ ಶಕ್ತಿಯಿಂದ ಜಲ ಶಕ್ತಿ' ಎನ್ನುವ ಘೋಷವಾಕ್ಯದೊಂದಿಗೆ ಮಳೆ ನೀರು ಹಿಡಿದಿಟ್ಟುಕೊಳ್ಳುವ ಸಲುವಾಗಿ ಜಲಶಕ್ತಿ ಅಭಿಯಾನಕ್ಕೆ ರಾಜ್ಯದಲ್ಲಿ ಚಾಲನೆ ನೀಡಲಾಗಿದೆ. ಸರ್ಕಾರದಿಂದ ಕೈಗೊಳ್ಳುವ ಕಾಮಗಾರಿಗಳಲ್ಲಿ ಮಳೆ ನೀರು ಹಿಡಿದಿಟ್ಟುಕೊಳ್ಳುವ ಸಲುವಾಗಿ ಮಳೆ ನೀರು ಕೊಯ್ಲಿನ ತಂತ್ರಜ್ಞಾನ ಬಳಸಿಕೊಳ್ಳಲಾಗುತ್ತಿದೆ. ಹೀಗೆ ಜಲ ಸಂರಕ್ಷಣೆಗಾಗಿ ಕೈಗೊಂಡ ಕಾಮಗಾರಿಗಳ ವಿವರ ಹಾಗೂ ಮಾಹಿತಿಯನ್ನು ತಾಲ್ಲೂಕು ಪಂಚಾಯಿತಿ ಹಾಗೂ ಅನುಷ್ಠಾನ ಇಲಾಖೆಗಳು ಜಲ ಶಕ್ತಿ ಅಭಿಯಾನ ಪೋರ್ಟಲ್‌ನಲ್ಲಿ ತಪ್ಪದೇ ಅಪ್‌ಲೋಡ್ ಮಾಡಬೇಕು ಎಂದು ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚಿಸಿದರು.**ಜಲ ಸಂರಕ್ಷಣೆಗೆ ಅಂತರ್**

**ಇಲಾಖೆ ಸಮನ್ವಯ ಅಗತ್ಯ:** ಜಲ ಸಂರಕ್ಷಣೆಗೆ ಅಂತರ್ ಇಲಾಖೆ ಸಮನ್ವಯ ಅಗತ್ಯವಾಗಿದೆ ಎಂದು ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಸಭೆಯಲ್ಲಿ ತಿಳಿಸಿದರು.

ನಗರಾಭಿವೃದ್ಧಿ ಹಾಗೂ ಇತರೆ ಸ್ಥಳೀಯ ಆಡಳಿತ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿನ ಚರಂಡಿ, ಕಲುಷಿತ ಹಾಗೂ ಬೂದು ನೀರನ್ನು ಸ್ವಚ್ಛಗೊಳಿಸಿ ಜಲ ಮೂಲಗಳಿಗೆ ಸೇರುವಂತೆ ನೋಡಿಕೊಳ್ಳಬೇಕು. ಹಸಿರು ಪ್ರದೇಶಗಳ ಅಭಿವೃದ್ಧಿ, ಪುರಾತನ ಜಲ ಮೂಲಗಳ ಮರುಪೂರಣ, ಮಳೆ ನೀರು ಕೊಯ್ಲು, ಜಲ ಸಂರಕ್ಷಣೆಗೆ ವೈಜ್ಞಾನಿಕ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು. ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕು. ಭೂದಾಖಲೆಗಳ ಇಲಾಖೆ ಜಲ ಮೂಲಗಳ ಒತ್ತುವರಿಯಾಗದಂತೆ ಕ್ರಮವಹಿಸಬೇಕು. ಕೃಷಿ ಇಲಾಖೆ, ಕೃಷಿ ವಿಜ್ಞಾನ ಕೇಂದ್ರ, ಕೃಷಿ ಮೇಳಗಳ ಮೂಲಕ ಜಲ ಸಂರಕ್ಷಣೆಯ ಬಗ್ಗೆ ರೈತರಿಗೆ ಮನವರಿಕೆ ಮಾಡಿಕೊಡಬೇಕು. ಶಿಕ್ಷಣ ಇಲಾಖೆ ಪ್ರತಿ ಶಾಲೆಗಳಲ್ಲಿ ಜಲದೂತ ಅಭಿಯಾನ ಆರಂಭಿಸಿ ಮಕ್ಕಳಲ್ಲಿ ಜಲ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸಬೇಕು. ಗ್ರಾಮ ಪಂಚಾಯಿತಿಗಳು ಮನರೇಗಾದಡಿ ಜಲ ಸಂರಕ್ಷಣೆಗೆ ಸಂಬಂಧಿಸಿದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕು. ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಜಲ ಸಂರಕ್ಷಣೆಗೆ ತಾಂತ್ರಿಕವಾಗಿ ನೆರವು ನೀಡಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಹಿಳೆಯರನ್ನು ಮುಖ್ಯ ವಾಹಿನಿಗೆ ತರುವ ಮೂಲಕ ಜಲ ಸಂರಕ್ಷಣೆ ಹಾಗೂ ಜಲ ನಿಯಂತ್ರಣದಲ್ಲಿ ಲಿಂಗ ಸಮಾನತೆ ಮೂಡಿಸಲು ಶ್ರಮಿಸಬೇಕು. 2024ರ ಜಲ ಸಂರಕ್ಷಣೆಯ ಘೋಷವಾಕ್ಯವೇ 'ನಾರಿ ಶಕ್ತಿಯಿಂದ ಜಲ ಶಕ್ತಿ' ಎನ್ನುವುದಾಗಿದೆ. ಈ ಇಲಾಖೆಗಳೊಂದಿಗೆ ಯುವಜನ ಕ್ರೀಡಾ ಇಲಾಖೆ ಮೇರಾ ಯುವ ಭಾರತ್ ಎನ್ನುವ ಸ್ವಯಂ ಸೇವಕ ಗುಂಪುಗಳನ್ನು ಸೃಜಿಸಿ ಜಾಗೃತಿ ಮೂಡಿಸಬೇಕು ಎಂದರು.

**ನೋಡಲ್ ಅಧಿಕಾರಿಗಳ ನೇಮಕ :** ಕೇಂದ್ರ ತಂಡಕ್ಕೆ ಮಾಹಿತಿ ನೀಡುವ ಸಲುವಾಗಿ ಹಾಗೂ ತಂಡ ಭೇಟಿ ನೀಡುವ ಸ್ಥಳಗಳನ್ನು ಗುರುತಿಸುವ ಸಲುವಾಗಿ ಸಭೆಯಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಲಾಯಿತು.ಸಣ್ಣನೀರಾವರಿ ಇಲಾಖೆ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳಾಗಿದ್ದು, ಎಲ್ಲಾ ತಾಲ್ಲೂಕುಗಳಿಂದ ಮಾಹಿತಿ ಪಡೆದುಕೊಳ್ಳಬೇಕು.ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಚಿತ್ರದುರ್ಗ ಹಾಗೂ ಹೊಳಲ್ಕೆರೆ, ತೋಟಗಾರಿಕೆ ಇಲಾಖೆ ಉಪನಿರ್ದೇಶಕರು ಹೊಸದುರ್ಗ ಮತ್ತು ಹಿರಿಯೂರು, ಕೃಷಿ ಇಲಾಖೆ ಉಪನಿರ್ದೇಶಕರನ್ನು ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಇವರೊಂದಿಗೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ನಗರ ಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸಹ ಕೇಂದ್ರ ತಂಡಕ್ಕೆ ಮಾಹಿತಿ ಒದಗಿಸುವಂತೆ ಸಭೆಯಲ್ಲಿ ತಿಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ತಿಮ್ಮಪ್ಪ, ನಾಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್ ಸೇರಿದಂತೆ ಮತ್ತಿತರರು ಇದ್ದರು.

# ಜಮೀನಿಗೆ ಮಳೆ ನೀರು ನುಗ್ಗಿ ಬೆಳೆ ಹಾನಿ





» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಆ.17ರ ಶನಿವಾರ ರಾತ್ರಿ ಸುರಿದ ಮಳೆಗೆ ಕೆಲವು ಜಮೀನುಗಳಲ್ಲಿ ನೀರು ನುಗ್ಗಿ ಲಕ್ಷಾಂತರ ರೂಪಾಯಿ ಬೆಳೆ ನಷ್ಟವಾಗಿದೆ. ಮಳೆಯಿಂದ ಗ್ರಾಮೀಣ ಭಾಗದ ಬಹುತೇಕ ಜಮೀನುಗಳಲ್ಲಿ ನೀರು ನುಗ್ಗಿ ಅಪಾರಹಾನಿ ಹಾಗು ನಷ್ಟವನ್ನು ಉಂಟುಮಾಡಿದೆ.

ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಬಾಲಣ್ಣ ಎಂಬುವವರಿಗೆ ಸೇರಿದ ರಿ ಸರ್ವೆ ನಂ 11/2ರಲ್ಲಿ ಮೂರು ಎಕರೆ ಪ್ರದೇಶದಲ್ಲಿದ್ದ ಮೆಕ್ಕೆಜೋಳ ಬೆಳೆ ನೀರಿನಿಂದ ಆವೃತ್ತವಾಗಿ ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ. ತಾಲ್ಲೂಕಿನ ಕಸಬಾ ಹೋಬಳಿಯ ನನ್ನಿವಾಳ ಗ್ರಾಮದ ಓಬಮ್ಮ ಎಂಬುವವರಿಗೆ ಸೇರಿದ ರಿ ಸರ್ವೆ, ನಂ. 141/4ರಲ್ಲಿದ್ದ ಎರಡು ಎಕರೆ ಈರುಳ್ಳಿ ಬೆಳೆ ನೀರಿನಿಂದ ಕೊಚ್ಚಿಹೋಗಿದೆ. ಓಬಯ್ಯನಹಟ್ಟಿಯ ರಿ.ಸರ್ವೆ, ನಂ. 26 ಮತ್ತು 27ರಲ್ಲಿ ನಾಗಭೂಷಣ್ ಎಂಬುವವರಿಗೆ ಸೇರಿದ ಎರಡು ಎಕರೆ ಈರುಳ್ಳಿಬೆಳೆ ನೀರಿನಿಂದ ಆವೃತ್ತವಾಗಿ 50 ಸಾವಿರ ನಷ್ಟ ಸಂಭವಿಸಿದೆ. ಇದೇ ಗ್ರಾಮದ ರಿ.ಸರ್ವೆ, ನಂ 23/3ರ ತಿಪ್ಪಮ್ಮ ಎಂಬುವವರಿಗೆ ಎರಡು ಎಕರೆ ಪ್ರದೇಶದ ಶೇಂಗಾ ಸಂಪೂರ್ಣ ಮಳೆಯ ನೀರಿಗೆ ಕೊಚ್ಚಿಹೋಗಿ ಲಕ್ಷಾಂತರ ರೂ. ನಷ್ಟ ಸಂಭವಿಸಿದೆ. ತಾಲ್ಲೂಕಿನ ಹಿರೇಹಳ್ಳಿ ಗ್ರಾಮದ ರಿ.ಸರ್ವೆ,ನಂ.59 ಕೆಂಗಯ್ಯ ಎಂಬುವವರ ಒಂದು ಎಕರೆ ಪ್ರದೇಶದ ಈರುಳ್ಳಿ ಬೆಳೆ ನೀರಿನಲ್ಲಿ ಮುಳುಗಿದೆ. ಇದೇ ಗ್ರಾಮದ ಕೆಂಚಮ್ಮ ಎಂಬುವವರ ಒಂದು ಕೆರೆ ಪ್ರದೇಶದ ಈರುಳ್ಳಿ ಬೆಳೆ ನೀರಿನಲ್ಲಿ ಕೊಚ್ಚಿಹೋಗಿ 50 ಸಾವಿರ ನಷ್ಟ ಸಂಭವಿಸಿದೆ. ಇದೇ ಗ್ರಾಮದ ಎಂ.ವಿ.ರುದ್ರಯ್ಯ ಎಂಬುವವರ ರಿ.ಸರ್ವೆ,ನಂ 93ರ ಎರಡು ಎಕರೆ ಪ್ರದೇಶದ ಈರುಳ್ಳಿ ಬೆಳೆ ನೀರಿನಲ್ಲಿ ಮುಳುಗಿ ಲಕ್ಷಾಂತರ ರೂ.ನಷ್ಟವಾಗಿದೆ.

## ಶ್ರೀನೀಲಕಂಠೇಶ್ವರ ದೇವಾಲಯ ಜೀರ್ಣೋದ್ದಾರ, ಕಳಸಸ್ಥಾಪನೆ



**ಚಳ್ಳಕೆರೆ:** ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದ ಶ್ರೀ ನೀಲಕಂಠೇಶ್ವರಸ್ವಾಮಿ ದೇವಾಲಯದ ಜೀರ್ಣೋದ್ದಾರ ಮತ್ತು ಗೋಪುರಕ್ಕೆ ಕಳಸ ಸ್ಥಾಪನೆ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಭಾನುವಾರ ಗಂಗಾಪೂಜೆಕಾರ್ಯವನ್ನುಚರಮತ್ತು ಸ್ಥಿರಪಟ್ಟಾಧ್ಯಕ್ಷರಾದ ಶ್ರೀರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವದಲ್ಲಿ ನಡೆದಿದ್ದು, ನೂರಾರು ಭಕ್ತರು ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



ಗ್ರಾಮದ ಸಮೀಪದಲ್ಲಿ ಹರಿಯುವ ಗರಣಿಹಳ್ಳದಲ್ಲಿ ಗಂಗಾಪೂಜೆ ಕಾರ್ಯವನ್ನು ನೆರವೇರಿಸಿದ್ದು, ನೂರಾರು ಸುಮಂಗಲಿಯರು ಕುಂಭವನ್ನು ಹೊತ್ತು ಮೆರವಣಿಗೆಯಲ್ಲಿ ಸಾಗಿದರು. ಬಂಡೆಬಸವೇಶ್ವರ ಸ್ವಾಮಿ ದೇವಸ್ಥಾನದಲ್ಲಿದ್ದ ಕಳಸವನ್ನು ಮಂಗಳವಾದ್ಯಗಳ ಮೆರವಣಿಗೆಯೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಜಯಕಾರದೊಂದಿಗೆ ತೆರಲಾಯಿತು. ಆ.19ರ ಸೋಮವಾರ ಬೆಳಗ್ಗೆ 5 ಗಂಟೆಗೆ ಕಳಸಾರೋಹಣ ಕಾರ್ಯಕ್ರಮ ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ನಡೆಯಲಿದೆ. ಭಾನುವಾರ ನಡೆದ ಗಂಗಾ ಪೂಜೆ ಮತ್ತು ಮೆರವಣಿಗೆ ಕಾರ್ಯಕ್ರಮದಲ್ಲಿ ವಿದ್ವಾನ್ ಡಾ.ವೀರೇಶ್‌ಹಿರೇಮಠ, ರೇಣುಕಾಸ್ವಾಮಿ, ನೀಲಕಂಠಶೆಟ್ಟಿ, ಕರಿಬಸಪ್ಪ, ಮುಂತಾದವರು ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

**ಅಡಿಕೆ, ತೆಂಗು, ಇತರೆ ಬೆಳೆಗಳಿಗೆ ನೀರು ನುಗ್ಗಿ ಅಪಾರ ಹಾನಿ: ಜಾಜೂರಿನಲ್ಲಿ ಸಿಡಿಲಿಗೆ ಮೃತಪಟ್ಟ 106 ಕುರಿಗಳು**

# ಚಳ್ಳಕೆರೆ ತಾಲ್ಲೂಕಿನಾದ್ಯಂತ ಆಶ್ಲೇಷ ಮಳೆಯ ಹಾವಳಿ

» **ಚಳ್ಳಕೆರೆ**





ತಾಲ್ಲೂಕಿನಾದ್ಯಂತ ಶುಕ್ರವಾರ ನಡುರಾತ್ರಿ ಆಶ್ಲೇಷ ಮಳೆಯ ಕಡೆಯಪಾದ ನಿರೀಕ್ಷೆಗೂ ಮೀರಿ ಹೆಚ್ಚಾಗಿದ್ದು, ಒಂದೇ ಹಂತದಲ್ಲಿ ಸುಮಾರು 239.14 ಎಂ.ಎಂ. ಮಳೆ ದಾಖಲಾಗಿದೆ. ಮಳೆಯಿಂದ ಜಮೀನಿನ ಬೆಳೆಗಳು ನೀರಿನಿಂದ ಆವೃತ್ತವಾಗಿ, ಸಿಡಿಲಿನಿಂದ ಸುಮಾರು 106 ಕುರಿಗಳು ಸಾವನಪ್ಪಿವೆ.

ತಾಲ್ಲೂಕಿನ ಜಾಜೂರು ಗ್ರಾಮದ ಅಂಜಿನಪ್ಪ ತನ್ನ ಬಾಬ್ತು 90, ಓಬಯ್ಯ 16 ಕುರಿಗಳನ್ನು ಮನೆ ಸಮೀಪದ ಕುರಿರೊಪ್ಪದಲ್ಲಿ ಕೂಡಿಹಾಕಿದ್ದರು. ರಾತ್ರಿ 10ರ ಸಮಯದಲ್ಲಿ ವಿಪರೀತ ಮಳೆ ಆರಂಭವಾಗಿ ಕುಡುಗು, ಮಿಂಚು ಸಹ ಆರಂಭವಾಗಿದೆ. ಇದೇ ಸಂದರ್ಭದಲ್ಲಿ ಸಿಡಿಲು ಬಡಿದು ಒಟ್ಟು 106 ಕುರಿಗಳು ಸಾವನಪ್ಪಿವೆ. ಘಟನೆ ನಡೆದ ಸ್ಥಳಕ್ಕೆ ತಹಶೀಲ್ದಾರ್ ರೇಹಾನ್‌ಪಾಷ, ಪಶುವೈದ್ಯಾಧಿಕಾರಿ ರೇವಣ್ಣ ಮತ್ತು ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿ, ಮೃತಪಟ್ಟ ಕುರಿಗಳ ಶವಪರೀಕ್ಷೆಯನ್ನು ನಡೆಸಿದರು. ತಾಲ್ಲೂಕಿನಾದ್ಯಂತ ಶುಕ್ರವಾರ ಮಳೆ ಪ್ರಮಾಣ ದೇವರಮರಿಕುಂಟೆ-63.04, ತಳಕು-59.02, ಪರಶುರಾಮಪುರ-49.02, ನಾಯಕನಹಟ್ಟಿ-41.06, ಚಳ್ಳಕೆರೆ-27.00 ಒಟ್ಟು 231.14 ಎಂ.ಎಂ. ಮಳೆಯಾಗಿದ್ದು, ಕಳೆದ 14ರ ರಾತ್ರಿ 198.18 ಎಂ.ಎಂ ಮಳೆಯಾಗಿತ್ತು. ಒಟ್ಟು ಮೂರು ದಿನಗಳಲ್ಲಿ 438.12 ಎಂ.ಎಂ ಮಳೆಯಾಗಿದೆ. ತಾಲ್ಲೂಕಿನ ಪಿ.ಮಹದೇವಪುರ ಗ್ರಾಮದ ಸಣ್ಣ ಹನುಮಕ್ಕ ಎಂಬುವವರ ರಿ ಸರ್ವೆ ನಂ,33/11ರಲ್ಲಿ 3.12 ಎಕರೆ ಕರಬೂಜ ಬೆಳೆ ಮಳೆಯ ನೀರಿನಿಂದ ಕೊಚ್ಚಿ ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿದೆ.

ಹೊಸಮುಚ್ಚುಗುಂಟೆ ಗ್ರಾಮದಲ್ಲಿ 3 ಎಕರೆ ಪ್ರದೇಶದಲ್ಲಿದ್ದ ಮೆಕ್ಕೆಜೋಳ, ಎರಡು ಎಕರೆ ಪ್ರದೇಶದ ಈರುಳ್ಳಿ ಬೆಳೆ ನೀರಿನಿಂದ ಆವೃತ್ತವಾಗಿ ಸಂಪೂರ್ಣ ನಷ್ಟ ಉಂಟಾಗಿದೆ. ಮನ್ನೇಕೋಟೆ ಗ್ರಾಮದ ಹರೀಶ್ ಎಂಬುವವರ ವಾಸದ ಮನೆಯ ಮೇಲ್ಚಾವಣೆ ಕುಸಿದು ಬಿದ್ದು 30 ಸಾವಿರ




ನಷ್ಟ ಸಂಭವಿಸಿದೆ. ರಾಮದುರ್ಗದ ನಿರಂಜನಮೂರ್ತಿ ಮತ್ತು ಕಸ್ತೂರಿ ರಂಗಪ್ಪನಾಯಕ ಎಂಬುವವರ ಮನೆಯ ಮೇಲ್ಚಾವಣೆ ಕುಸಿದು ಒಂದು ಲಕ್ಷಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ವಿಡಪನಕುಂಟೆ ಗ್ರಾಮದ ಸರ್ವೆ ನಂ, 57/3 ತಾಯಮ್ಮ ಎಂಬುವವರ ಸೇರಿದ ಎಂಟು ಎಕರೆ ಪ್ರದೇಶದ ಅಡಿಕೆ ಗಿಡಿ ಸಂಪೂರ್ಣವಾಗಿ ನೀರಿನಿಂದ ಆವೃತ್ತವಾಗಿ ಲಕ್ಷಾಂತರ ರೂಪಾಯಿನಷ್ಟವಾಗಿದೆ.ದೇವರಮರಿಕುಂಟೆ ಗ್ರಾಮ ಸರ್ಕಾರಿ ಶಾಲೆಯ ಆವರಣದಲ್ಲಿ ಮಳೆಯ ನೀರು ನುಗ್ಗಿ ಮಕ್ಕಳು ಶಾಲೆಯ ಒಳಗೆ ಪ್ರವೇಶಿಸದಂತಹ ವಾತಾವಣ ಉಂಟಾಗಿದೆ. ಶಾಲೆಯ ಸುತ್ತಲು ನೀರು ನಿಂತು ನೀರು ದಾಟಲು ವಿದ್ಯಾರ್ಥಿಗಳು ಪರಿತಪಿಸಿದರು. ಗ್ರಾಮದ ಶಾಲಾ ಕಟ್ಟಡ ಶಿಥಿಲ ವ್ಯವಸ್ಥೆಯಲ್ಲಿದ್ದು ತುರ್ತು ರಿಪೇರಿಗೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಫಾಸ್ಟ್ ನ್ಯೂಸ್

## ರಾಜ್ಯಪಾಲರ ವಿರುದ್ಧ ಟೈರ್ ಸುಟ್ಟು ಜಿಲ್ಲಾ ಕಾಂಗ್ರೆಸ್‌ನಿಂದ ಪ್ರತಿಭಟನೆ

» ಮೊದಲ ಪುಟದಿಂದ

ಕಾಂಗ್ರೆಸ್ ಮುಖಂಡರು ಮರಳಿ ಮತ್ತೊಂದು ಟೈರ್ ತಂದು ಹಚ್ಚಲು ಯತ್ನಿಸಿದರು ಸಹ ಪೋಲಿಸರು ತಡೆದ ಘಟನೆ ನಡೆಯಿತು.ಕಾಂಗ್ರೆಸ್ ಮುಖಂಡರು ಪ್ರತಿಭಟನೆಗೆ ಅವಕಾಶ ನೀಡುತ್ತಿಲ್ಲ, ನೀವು ಏಕೆ ಹತ್ತಿಕ್ಕುತ್ತಿರಿ ಎಂದು ಪೋಲಿಸರ ವಿರುದ್ಧ ಆಕ್ರೋಶ ಹೊರ ಹಾಕಿದರು.ಹಿಂದುಳಿದ ವರ್ಗಗಳ ನಾಯಕ ಸಿದ್ದರಾಮಯ್ಯ ಅವರನ್ನು ತುಳಿಯಲು ಕೇಂದ್ರದ ಎನ್ ಡಿಎ ಸರ್ಕಾರ ಯತ್ನಿಸುತ್ತಿದೆ. ರಾಜ್ಯದಲ್ಲಿ ರಾಜ ಭವನವನ್ನು ರಾಜ್ಯಪಾಲರು ಬಿಜೆಪಿ ಕಚೇರಿ ಮಾಡಿಕೊಂಡಿದ್ದಾರೆ ಎಂದು ಕಿಡಿಕಾರಿದರು. ಗವರ್ನರ್ ಅವರು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಅಸ್ಥಿರಗೊಳಿಸಲು ಯತ್ನಿಸುತ್ತಿದ್ದಾರೆ. ಭ್ರಷ್ಟ ಬಿಜೆಪಿ ಸರ್ಕಾರ ರಾಜ್ಯ ಸರ್ಕಾರ ವಿರುದ್ಧ ನರೇಂದ್ರ ಮೋದಿ, ಅಮಿತ್ ಷಾ ರಾಜ್ಯಪಾಲರನ್ನು ಕೈಗೊಂಬೆ ಮಾಡಿಕೊಂಡಿದ್ದಾರೆ.ಈ ಪ್ರತಿಭಟನೆಯಲ್ಲಿ ಕಾಂಗ್ರೆಸ್ ಮುಖಂಡರಾದ ಬಿ.ಟಿ.ಜಗದೀಶ್, ಸಿ.ಟಿ. ಕೃಷ್ಣಮೂರ್ತಿ ಹೆಚ್.ಮಂಜಪ್ಪ, ಸಂಪತ್ ಕುಮಾರ್, ಖುದ್ದುಸ್, ಪ್ರಕಾಶ್ ರಾಮನಾಯ್ಕ್,ಸೇರಿ ಅನೇಕ ಮುಖಂಡರು ಭಾಗವಹಿಸಿದ್ದರು.

## ಜಿಲ್ಲಾ ಮಟ್ಟದ ಹೊಯ್ಸಳ, ಕೆಳದಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ನಾವೀನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ 5 ರಿಂದ 18 ವರ್ಷದೊಳಗಿನ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಹಾಗೂ 10,000 ಸಾವಿರ ನಗದು ಬಹುಮಾನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಗೆ ಆಯ್ಕೆಯಾಗುವ ಮಕ್ಕಳು ಅಪ್ರತಿಮ ಪ್ರತಿಭೆಯುಳ್ಳವರಾಗಿರಬೇಕು, ಸಾಧನೆ ಅಸಾಧಾರಣವೆಂದು ಸಮರ್ಥಿಸಲು ಪೂರಕ ದಾಖಲೆಗಳನ್ನು ಸೆ.18 ರ ಒಳಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಉಪನಿರ್ದೇಶಕರ ಕಚೇರಿ, ಸರ್ಕಾರಿ ಬಾಲಕರ ಬಾಲಮಂದಿರ ಆವರಣ, ಎಂ.ಸಿ.ಸಿ. ಬಿ.ಬ್ಲಾಕ್ ಕುವೆಂಪು ನಗರ ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ 08192–264056 ಸಂಖ್ಯೆಗೆ ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ರಾಜಾನಾಯ್ಕ್ ತಿಳಿಸಿದ್ದಾರೆ.

## ಜಿಲ್ಲಾ ಕುಸ್ತಿ ಖೇಲೋ ಇಂಡಿಯಾ ಕೇಂದ್ರಕ್ಕೆ ತರಬೇತುದಾರರ ಆಯ್ಕೆಗೆ ಅರ್ಜಿ ಆಹ್ವಾನ

» ದಾವಣಗೆರೆ

ದಾವಣಗೆರೆ ಜಿಲ್ಲೆಯ ಕುಸ್ತಿ ಖೇಲೋ ಇಂಡಿಯಾ ಕೇಂದ್ರಕ್ಕೆ ಅಂತರಾಷ್ಟ್ರೀಯ ಮಟ್ಟ ಹಾಗೂ ರಾಷ್ಟ್ರ ಮಟ್ಟದ ಕ್ರೀಡಾಪಟುಗಳನ್ನು ತರಬೇತುದಾರರಾಗಿ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಹ ಕುಸ್ತಿ ಕ್ರೀಡಾಪಟುಗಳು ಆಗಸ್ಟ್ 22 ರ ಒಳಗಾಗಿ ಎಲ್ಲಾ ಅವಶ್ಯಕ ದಾಖಲೆಗಳ ದೃಢೀಕೃತ ಪ್ರತಿಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಜಿಲ್ಲಾ ಕ್ರೀಡಾಂಗಣ ಇಲ್ಲಿಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ 08192–237480 ಗೆ ಕರೆ ಮಾಡಬಹುದಾಗಿದೆ ಎಂದು ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಉಪ್ಪಾರ ಅಭಿವೃದಿ ನಿಗಮದಿಂದ ವಿವಿಧ ಯೋಜನೆಯ ಸಾಲ ಸೌಲಭ್ಯ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಉಪ್ಪಾರ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ನೇರಸಾಲ, ಸ್ವಯಂ ಉದ್ಯೋಗ ನೇರಸಾಲ (ಬ್ಯಾಂಕುಗಳ ಸಹಯೋಗದೊಂದಿಗೆ), ಅರಿವು ಶೈಕ್ಷಣಿಕ ಸಾಲ ಯೋಜನೆ (ನೂತನ), ಅರಿವು ಶೈಕ್ಷಣಿಕ ಸಾಲ ಯೋಜನೆ (ನವೀಕರಣ), ವಿದೇಶಿ ವ್ಯಾಸಂಗ ಸಾಲ ಯೋಜನೆ (ಈ ಯೋಜನೆಯಡಿ ವಾರ್ಷಿಕ ವರಮಾನವು ರೂ.8.00ಲಕ್ಷಗಳ ಮೀತಿಯಲ್ಲಿರಬೇಕು), ಗಂಗಾ ಕಲ್ಯಾಣ ನೀರಾವರಿ ಯೋಜನೆಯಡಿ ಕನಿಷ್ಠ 2 ಎಕರೆ ಹೊಂದಿರಬೇಕು, ಸ್ವಾವಲಂಬಿ ಸಾರಥಿ ಯೋಜನೆಗಳ ಸಾಲ ಸೌಲಭ್ಯಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸಲು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮಒನ್, ಬೆಂಗಳೂರು ಒನ್, ಕರ್ನಾಟಕ ಒನ್, ಅಟಲ್ ಜಿ ಜನಸ್ನೇಹಿ ಮತ್ತು ನಾಗರೀಕ ಸೇವಾ ಕೇಂದ್ರಗಳ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಲು ಸೆ.16 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿಗಾಗಿ ನಿಗಮದ ವೆಬ್‌ಸೈಟ್ https://upparadevelopment.karnataka.gov.in ಇಲ್ಲಿ ವಿಕ್ಷಿಸಬಹುದು.

### ಭಕ್ತಾಧಿಗಳಿಗೆ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಿ; ಲೋಪವಾಗದಂತೆ ಜಾಗ್ರತೆ ವಹಿಸಿ: ಶಾಸಕ ಎನ್.ವೈ.ಗೋಪಾಲಕೃಷ್ಣ

# ಮಧ್ಯಾಹ್ನದ ಮಾರಿ ಗೌರಸಮುದ್ರ ಮಾರಮ್ಮ ಜಾತ್ರೆ

» ಚಳ್ಳಕೆರೆ

ಜಿಲ್ಲೆಯ ಪ್ರಸಿದ್ದ ಲಕ್ಷಾಂತರ ಭಕ್ತರು ಆಗಮಿಸಿ ವಿಜೃಂಭಣೆಯಿಂದ ನಡೆಸುವ ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಶ್ರೀಮಾರಮ್ಮನ ಜಾತ್ರೆ ಸೆ.2,3 ಮತ್ತು 4 ಮೂರು ದಿನಗಳ ಕಾಲ ನಡೆಯಲಿದ್ದು, ಜಾತ್ರೆಯನ್ನು ಯಶಸ್ವಿಯಾಗಿ ನಡೆಸಬೇಕಲ್ಲದೆ, ಆಗಮಿಸುವ ಎಲ್ಲಾ ಭಕ್ತರಿಗೆ ಸೂಕ್ತ ಸೌಲಭ್ಯ ಕಲ್ಪಿಸಿ, ಯಾವುದೇ ತೊಂದರೆಯಾಗದಂತೆ ಎಲ್ಲಾ ಅಧಿಕಾರಿಗಳು ಜಾಗ್ರತೆ ವಹಿಸಿ ಎಂದು ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.



ಅವರು, ತಾಲ್ಲೂಕು ಕಚೇರಿ ಆವರಣದಲ್ಲಿ ಶನಿವಾರ ಜಾತ್ರಾ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆಯ ವಹಿಸಿ ಮಾತನಾಡಿದರು. ಪ್ರತಿ ವರ್ಷವೂ ಜಾತ್ರೆಗೆ ಆಗಮಿಸುವ ಭಕ್ತರ ಸಂಖ್ಯೆ ಗಣನೀಯವಾಗಿ ಹೆಚ್ಚುತ್ತಿದೆ, ಮೂಲಭೂತ ಸೌಕರ್ಯಗಳ ಕೊರತೆ ಉಂಟಾಗದಂತೆ ವ್ಯವಸ್ಥೆ ಮಾಡಬೇಕಿದೆ. ವಿಶೇಷವಾಗಿ ಕುಡಿಯುವ ನೀರು, ಶೌಚಾಲಯ, ಸ್ವಚ್ಚತೆ, ಸಾರಿಗೆ ವ್ಯವಸ್ಥೆ, ಪಾರ್ಕಿಂಗ್ ವ್ಯವಸ್ಥೆ, ಆರೋಗ್ಯ, ರಸ್ತೆ ರಿಪೇರಿ ಮುಂತಾದ ಕಾರ್ಯಗಳನ್ನು ಸಮಾರೋಪಾದಿಯಲ್ಲಿ ಆರಂಬಿಸಬೇಕು.

ವಿಶೇಷವಾಗಿ ಗೌರಸಮುದ್ರ ಜಾತ್ರೆ ಹಿನ್ನೆಲೆಯಲ್ಲಿ ಆ ಭಾಗದ ಸಂಪರ್ಕ ರಸ್ತೆಗಳ ರಿಪೇರಿಗಾಗಿ ಸುಮಾರು 5 ಕೋಟಿ ಹಣವನ್ನು ನೀಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ. ಇದರ ಜೊತೆಯಲ್ಲಿ ಇನ್ನೂ ಎರಡು ಪ್ರಮುಖ ರಸ್ತೆಗಳ ನಿರ್ಮಾಣಕಾರ್ಯದ ಭೂಮಿಪೂಜೆ ಶೀಘ್ರದಲ್ಲೇ ನೆರವೇರಿಸಲಾಗುವುದು. ಸರ್ಕಾರ ಜನಪರ, ಜನೋಪಯೋಗಿ ಹಾಗೂ ಜನರ ಕಲ್ಯಾಣಕ್ಕೆ ಸ್ಪಂದಿಸುವ ಸರ್ಕಾರವಾಗಿದೆ ಎಂದರು. ತಹಶೀಲ್ದಾರ್ ರೇಹಾನ್‌ಪಾಷ ಮಾತನಾಡಿ, ಈಗಾಗಲೇ ತಾಲ್ಲೂಕು ಆಡಳಿತದಿಂದ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿ ಕಾಯೋನ್ಮುಖರಾಗಲು ನಿರ್ದೇಶನ ನೀಡಲಾಗಿದೆ ಎಂದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಗೌರಸಮುದ್ರ ಗ್ರಾಮ, ತುಮಲು ಹಾಗೂ ದೇವಸ್ಥಾನ ಆವರಣದಲ್ಲಿ ಸ್ವಚ್ಚತೆ, ಚರಂಡಿಗೆ ಡಿಡಿಟಿ ಸಿಂಪಡಿಸುವುದು ಸೇರಿದಂತೆ ಹಲವಾರು ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗುವುದು. ಪಿಡಿಒ ಹನುಮಂತರಾಯಗೆ ನಿರ್ದೇಶನ ನೀಡಲಾಗಿದೆ ಎಂದರು.

ಲೋಕೋಪಯೋಗಿ ಸಹಾಯಕ ಇಂಜಿನಿಯರ್ ವಿಜಯಭಾಸ್ಕರ್,ಹೆಚ್ಚುವರಿ ರಸ್ತೆಗಳ ನಿರ್ಮಾಣಕ್ಕಾಗಿ ಸರ್ಕಾರ ಹಣ ಮಂಜೂರಾಗಿದ್ದು, ಸಾಧ್ಯವಾದರೆ ಶಾಸಕರ ಮಾರ್ಗದರ್ಶನದಲ್ಲಿ ಕಾಮಗಾರಿ ಆರಂಭಿಸುವುದಾಗಿ ತಿಳಿಸಿದರು. ಜಿಲ್ಲಾ ಪಂಚಾಯಿತಿ ಇಂಜಿನಿಯರಿಂಗ್ ವಿಭಾಗದ ಎನ್.ಕಾವ್ಯ, ಈಗಾಗಲೇ ರಸ್ತೆಗಳಲ್ಲಿರುವ ಜಾಲಿಗಿಡಗಳನ್ನು ತೆರವುಗೊಳಿಸಿದೆ, ನಮ್ಮ ವ್ಯಾಪ್ತಿಯ ರಸ್ತೆಗಳ ರಿಪೇರಿಕಾರ್ಯಪೂರ್ಣಗೊಳಿಸಲಾಗುವುದು. ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಅಧಿಕಾರಿ ಮಾಹಿತಿ ನೀಡಿ, ಈಗಾಗಲೇ ಮೂರಕ್ಕೂ ಹೆಚ್ಚುಬೋರ್‌ಗಳಲ್ಲಿನೀರಿದ್ದು ಅಗತ್ಯಬಿದ್ದಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಹೆಚ್ಚುವರಿ ಬೋರ್ ಕೊರೆಸಲಾಗುವುದು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಗ್ರಾಮದಲ್ಲಿರುವ ಶಾಲೆಗಳ ಎಲ್ಲಾ ಕೊಠಡಿಗಳುರಿಪೇರಿಯಾಗಿದ್ದು,ಯಾವುದೇ ಸಮಸ್ಯೆ ಇಲ್ಲವೆಂದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್.ಕಾಶಿ ಮಾಹಿತಿ ನೀಡಿ, ಗ್ರಾಮದಲ್ಲಿಯೇ ತಾತ್ಕಾಲಿಕ ಆಸ್ಪತ್ರೆಯೊಂದಿಗೆ ಮೂರು ಅಂಬ್ಯುಲೆನ್ಸ್ ಕಾರ್ಯನಿರ್ವಹಿಸಲಿದೆ, ಹೆಚ್ಚುವರಿ ವೈದ್ಯರ ನಿಯೋಜನೆ ಮಾಡಲಾಗುವುದು ಎಂದರು. ಪಶುವೈದ್ಯಾಧಿಕಾರಿ ರೇವಣ್ಣ, ಇಲಾಖವತಿಯಿಂದ ಹೆಚ್ಚುವರಿ ಆಸ್ಪತ್ರೆಗಳನ್ನು ಪ್ರಾರಂಭಿಸಿ ಯಾವುದೇ ಸಮಸ್ಯೆಯಾಗದಂತೆ ನೋಡಿಕೊಳ್ಳಲಾಗುವುದು. ಬೆಸ್ಕಾಂ ಅಧಿಕಾರಿ ಮಮತ ಮಾಹಿತಿ ನೀಡಿ, ಗ್ರಾಮದಲ್ಲಿ 100 ಕೆ.ವಿ.ಟ್ರಾನ್ಸ್‌ಫಾರ್ಮ್ ಇದ್ದು ಅಗತ್ಯವಿದ್ದಲ್ಲಿ ಹೆಚ್ಚುವರಿ ಟ್ರಾನ್ಸ್‌ಫಾರ್ಮರನ್ನು ಅಳವಡಿಸಲಾಗುವುದು ಎಂದರು.ಡಿವೈಎಸ್ಪಿ ಟಿ.ಬಿ.ರಾಜಣ್ಣ, ಪೊಲೀಸ್ ಇಲಾಖೆ ಬ್ಯಾರಿಕೇಟ್ ನಿರ್ಮಿಸಿ, ಬಂದೋಬಧ್ ನಿರ್ಮಿಸಲಾಗುವುದು,10 ಕಡೆ ಸಿಸಿ ಕ್ಯಾಮರ ಅಳವಡಿಸಲಾಗುವುದು, ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ಪ್ರಭು, ಕಳೆದ ಬಾರಿ 40 ಬಸ್‌ಗಳ ಸೇವೆ ಒದಗಿಸಿದ್ದು, ಈ ಬಾರಿ ಹೆಚ್ಚುವರಿ ಬಸ್ ಸೇವೆ ಕಲ್ಪಿಸಲಾಗುವುದು ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ ಮಾಹಿತಿ ನೀಡಿ, ಜಾತ್ರೆಯನ್ನು ಯಶಸ್ವಿಯಾಗಿ ಪೂರೈಸಲು ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸುವಂತೆ ಶಾಸಕರಿಗೆ ಮನವಿ ಮಾಡಿದರು.

# ಕೋಲ್ಕತ್ತ ವೈದ್ಯೆ ಅತ್ಯಾಚಾರ, ಅಮಾನವೀಯ ಹತ್ಯೆ ಘಟನೆ ಖಂಡಿಸಿ ವೈದ್ಯರ ಸಂಘ ಪ್ರತಿಭಟನೆ

» ಚಳ್ಳಕೆರೆ

ರಾಷ್ಟ್ರದ ಕೋಲ್ಕತ್ತ ನಗರದ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಕರ್ತವ್ಯ ನಿರತ ವೈದ್ಯಯ ಮೇಲೆ ಕ್ರೂರವಾಗಿ ಅತ್ಯಾಚಾರ ನಡೆಸಿ ಆಕೆಯನ್ನು ಕೊಲೆ ಮಾಡಿದ ಘಟನೆಯನ್ನು ಖಂಡಿಸಿ ಚಳ್ಳಕೆರೆ ತಾಲ್ಲೂಕು ವೈದ್ಯರ ಸಂಘ ಪ್ರತಿಭಟನೆ ನಡೆಸಿ ಪ್ರಧಾನಮಂತ್ರಿಗಳಿಗೆ ಮನವಿ ನೀಡಿದೆ.




ತಾಲ್ಲೂಕು ವೈದ್ಯರ ಸಂಘದ ಡಾ.ಟಿ.ಎಂ.ನಟರಾಜ್ ಅಧ್ಯಕ್ಷತೆಯಲ್ಲಿ ನಗರದ ನೂರಕ್ಕೂ ಹೆಚ್ಚು ವೈದ್ಯರು ನೆಹರೂ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಅತ್ಯಾಚಾರಿಗೆ ಕ್ರೂರ ಶಿಕ್ಷೆ ವಿಧಿಸಬೇಕೆಂದು ಆಗ್ರಹಿಸಿದರಲ್ಲದೆ, ಖಾಸಗಿ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುವ ವೈದ್ಯರು ಮತ್ತು ಸಿಬ್ಬಂದಿ ವರ್ಗಕ್ಕೆ ಸೂಕ್ತ ರಕ್ಷಣೆ ನೀಡಬೇಕೆಂದರು.

ತಹಶೀಲ್ದಾರ್ ಪರವಾಗಿ ಶಿರಸ್ತೇದಾರ್ ಸದಾಶಿವಪ್ಪ ಮನವಿ ಸ್ವೀಕರಿಸಿ ಮಾತನಾಡಿ, ತಾವು ನೀಡಿದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಮಂತ್ರಿಗಳ ಕಾರ್ಯಾಲಯಕ್ಕೆ ಕಳಿಸುವ ಭರವಸೆ ನೀಡಿದರು. ಅಧ್ಯಕ್ಷ ಡಾ.ಟಿ.ಎಂ.ನಟರಾಜ್ ಮಾತನಾಡಿ, ವೈದ್ಯರ ಮೇಲೆ ಆಗಾಗ ಹಲ್ಲೆ ಪ್ರಕರಣಗಳು ನಡೆಯುತ್ತಿದ್ದು ಇದು ಕೊನೆಯಾಗಬೇಕಿದೆ. ಕರ್ತವ್ಯ ನಿರ್ವಹಿಸುವ ವೈದ್ಯರಿಗೆ ಸೂಕ್ತ ರಕ್ಷಣೆ ವ್ಯವಸ್ಥೆ ಇಲ್ಲದೆ ಇಂತಹ ಘಟನೆಗಳು ಮರುಕಳಿಸುತ್ತಿವೆ. ಇಂದಿನ ಪ್ರತಿಭಟನೆ ಭಾರತೀಯ ವೈದ್ಯಕೀಯ ಸಂಘ, ಆಯುಷ್ ಫೆಡರೇಷನ್ ಆಫ್ ಇಂಡಿಯಾ ಸಹಯೋಗದೊಂದಿಗೆ ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಲಾಗುತ್ತಿದೆ ಎಂದರು.

ಉಪಾಧ್ಯಕ್ಷ ಅಮೀತ್‌ಗುಪ್ತ, ಕಾರ್ಯದರ್ಶಿ ಡಾ.ಅರುಣ್‌ಕುಮಾರ್‌ಕೂನ, ಖಜಾಂಚಿ ಡಿ.ಎನ್. ಮಂಜುನಾಥ, ಡಾ.ಕೆ.ಎಂ.ಜಯಕುಮಾರ್, ಡಾ.ಜಿ.ತಿಪ್ಪೇಸ್ವಾಮಿ, ರಾಷ್ಟ್ರೀಯ ಸಮಿತಿ ಸದಸ್ಯ ಡಾ.ಓಬಣ್ಣಪೂಜಾರ್, ಡಾ.ಬಿ.ಚಂದ್ರನಾಯ್ಕ, ರಾಜ್ಯ ಸಮಿತಿ ಸದಸ್ಯ ಡಾ.ಎಂ.ವಿ.ಕೃಷ್ಣರಾಜು, ಡಾ.ಬಸವರಾಜು, ಡಾ.ಆರ್.ವೆಂಕಟೇಶ್, ಡಾ.ಶೇಕ್, ಡಾ.ಸುದರ್ಶನ್, ಡಾ.ಸುನೀಲ್, ಡಾ.ಪ್ರದೀಪ್, ಬಿ.ಫರೀದ್‌ಖಾನ್, ವಿನಾಯಕ, ವೀರೇಶ್,.ಛಲಂ, ಔಷಧಿ ವ್ಯಾಪಾರಿಗಳ ಸಂಘ ಮತ್ತು ಲ್ಯಾಬುರೋಟರಿ ಸಂಘ, ಎನ್.ಜಯಣ್ಣ ನರ್ಸಿಂಗ್ ಕಾಲೇಜು, ಬಾಪೂಜಿ ಆರ್ಯುವೇದಿಕೆ ಕಾಲೇಜು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಕಾನೂನು ಮೂಲಕ ಸಿಎಂ ಹೋರಾಟ ಮಾಡಲಿ: ವಿಪಕ್ಷ ನಾಯಕ

» ಮೊದಲ ಪುಟದಿಂದ

ಜಮೀನು ಖರೀದಿಗೆ ಎಸ್.ಟಿ ನಿಗಮದ ಹಣ ವರ್ಗಾವಣೆ ಆಗಿದೆ. ದಲಿತನಿಗೆ ಸೇರಬೇಕಾದ ಜಮೀನ ಪರಿಹಾರ ಸಿಎಂ ಪಡೆದಿದ್ದಾರೆ.. ಅದು ಸರ್ಕಾರದ ಜಮೀನಾಗಿತ್ತು, ಇವೆಲ್ಲ ಭ್ರಷ್ಟಾಚಾರದ ಭಾಗ.ಸಿಎಂ ರಾಜೀನಾಮೆಕೊಡಲ್ಲಎಂದುಹೇಳಿಕೆವಿಚಾರಕ್ಕೆಪ್ರತಿಕ್ರಿಯಿಸಿಸಿದ್ಧರಾಮಯ್ಯ ಇನ್ನೋರ್ವ ಕೇಜ್ರಿವಾಲ್ ಆಗೋದಾದರೆ ಆಗಲಿ.ಕೋರ್ಟ್‌ಲ್ಲಿ ನ್ಯಾಯ ಪಡೆದು ಮತ್ತೆ ಬನ್ನಿ ತೊಂದರೆ ಇಲ್ಲ...ಸಿಎಂ ಸ್ಥಾನದಲ್ಲಿದ್ದರೆ ಪ್ರಕರಣ ಮುಚ್ಚಿ ಹಾಕುವ ಸಂದರ್ಭ ಇರುತ್ತದೆ ಎಂದು ದೂರಿದರು. ಸಿಎಂ ಸಿದ್ಧರಾಮಯ್ಯ ಬಂಧನ ಆಗಲೇಬೇಕಾಗುತ್ತದೆ...ಬಂಧನ ಆಗದೆ ತನಿಖೆ ಹೇಗೆ ಎದುರಿಸುತ್ತೀರಿ.?ಬಿಎಸ್ ವೈ ಪ್ರಕರಣದಲ್ಲಿ ರಾಜ್ಯಪಾಲರು ಕಾನೂನು ಪಾಲನೆ ಎಂದಿದ್ದೀರಿ..ಈಗ ರಾಜ್ಯಪಾಲರು ಕಾನೂನು ಉಲ್ಲಂಘಿಸಿದ್ದಾರೆ ಎನ್ನುತ್ತೀರಿ.ಗೃಹ ಸಚಿವ ಪರಮೇಶ್ವರ್‌ಗೆ ಆವತ್ತು ಗೊತ್ತಿರಲಿಲ್ಲವೇ ಸಂವಿಧಾನದ ಹುದ್ದೆಯಲ್ಲಿರುವವರಿಗೆ ಗೌರವಿಸುವುದು ಕಲಿಯಿರಿ..ಕಾಂಗ್ರೆಸ್ ಕಾಲದಲ್ಲಿ ಅನೇಕ ರಾಜ್ಯ ಸರ್ಕಾರಗಳ ವಜಾ.. ಬಿಜೆಪಿ ಕಾಲದಲ್ಲಿ ಯಾವುದೇ ರಾಜ್ಯ ಸರ್ಕಾರವನ್ನೂ ಬೀಳಿಸಿಲ್ಲ. ಕಾಂಗ್ರೆಸ್ ಭ್ರಷ್ಟಾಚಾರದ ವಿರುದ್ಧ ನಿರಂತರ ಹೋರಾಟ.ಹೆಚ್.ಡಿ.ಕೆ, ನಿರಾಣಿ, ಜೊಲ್ಲೆ ಕೇಸ್ ಪ್ರಾಸಿಕ್ಯೂಷನ್‌ಗೆ ಕೊಟ್ಟಿಲ್ಲ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿ ಕೋರ್ಟ್‌ಗೆ ಹೋಗಿ ಈ ಬಗ್ಗೆ ಪ್ರಶ್ನೆ ಮಾಡಲಿ. ರಾಜ್ಯಪಾಲರಿಗೆ ದಾಖಲೆ ಅವಲೋಕಿಸಿ ನಿರ್ಧಾರಿಸುವ ಹಕ್ಕಿದೆ.ಅವರಿಗೇಕೆ ಕೊಟ್ಟಿಲ್ಲ, ನಮಗೇಕೆ ಕೊಟ್ಟಿರೆನ್ನುವುದು ಮಕ್ಕಳಾಟ.ಯೋಗ್ಯವಲ್ಲದ ಪ್ರಕರಣ ಪ್ರಾಸಿಕ್ಯೂಷನ್ ಕೊಟ್ಟಿರಲಿಕ್ಕಿಲ್ಲ..ಇಡೀ ರಾಜ್ಯ ಹೋರಾಟ ಮಾಡುವಾಗ ರಾಜ್ಯಪಾಲ ಕೈಕಟ್ಟಿರಬೇಕಾ...? ಎಂದರು. 136 ಜನ ಶಾಸಕರಿದ್ದಾರೆಂದು ಹೇಳುತ್ತೀರಿ. ಹೋಗಿ ಅವರಂತೆ ಅವಿವೇಕತನದಿಂದ ಮಾತಾಡಬೇಡಿ, ವಿವೇಕದಿಂದ ಮಾತಾಡಿ. ಸಂವಿಧಾನ, ಪ್ರಜಾಪ್ರಭುತ್ವ, ಅಂಬೇಡ್ಕರ್ ಬಗ್ಗೆ ಗೌರವ ಇದ್ದರೆ ರಾಜೀನಾಮೆ ಕೊಡಿ ನ್ಯಾಯಾಲಯಕ್ಕೆ ಹೋಗಿ ಹೋರಾಟ ಮಾಡಿ ತಡ ಮಾಡದೆ ಸಿಎಂ ಸ್ಥಾನಕ್ಕೆ ಸಿದ್ಧರಾಮಯ್ಯ ರಾಜೀನಾಮೆ ಕೊಡಲಿ ಎಂದು ಛಲವಾದಿ ನಾರಾಯಣಸ್ವಾಮಿ ಒತ್ತಾಯಿಸಿದರು.

ಸಂಸದ ಗೋವಿಂದ ಕಾರಜೋಳ ಮಾತನಾಡಿ ಜಿಲ್ಲೆಯಲ್ಲಿ ಈ ಬಾರಿ ಉತ್ತಮವಾದ ಮಳೆಯಾಗಿದೆ, ಅದೇಚ ರೀತಿ ವಿವಿಧ ಕಡೆಗಳಲ್ಲಿ ಅನಾಹುತವಾಗಿದೆ. ಕೆಲವಡೆಗಳಲ್ಲಿ ಮನೆಗಳು ಹಾಳಾಗಿವೆ, ಹೊಲದಲ್ಲಿ ಬೆಳೆ ಕೊಚ್ಚಿಹೋಗಿದೆ, ಸಿಡಿಲಿನ ಬಡಿತಕ್ಕೆ ಕುರಿಗಳ ಸಾವಾಗಿದೆ, ಸರ್ಕಾರ ಇವುಗಳನ್ನು ಪರಿಶೀಲಿಸಿ ಅನಾಹುತಕ್ಕೆ ತಕ್ಕಂತೆ ಪರಿಹಾರವನ್ನು ನೀಡಬೇಕಿದೆ ಈ ಕಾರ್ಯ ಶೀಘ್ರವಾಗಿ ಆಗಬೇಕಿದೆ, ಜಿಲ್ಲಾಧಿಕಾರಿಗಳಿ ಇದರ ಬಗ್ಗೆ ವರದಿಯನ್ನು ತರಿಸಿಕೊಂಡು ಶೀಘ್ರವಾಗಿ ಪರಿಹಾರವನ್ನು ನೀಡುವ ಕಾರ್ಯವನ್ನು ಪ್ರಾರಂಭಿಸಬೇಕು ಎಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಮುರಳಿ, ಜಿ.ಪಂ. ಮಾಜಿ ಅಧ್ಯಕ್ಷರಾದ ಶ್ರೀಮತಿ ಸೌಭಾಗ್ಯ ಬಸವರಾಜನ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ವಕ್ತಾರ ದಗ್ಗೆ ಶಿವಪ್ರಕಾಶ್, ಶಿವಣ್ಣಚಾರ್, ತಿಪ್ಪೇಸ್ವಾಮಿ ಛಲವಾದಿ, ಭಾರ್ಗವಿ ದ್ರಾವಿಡ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಕೆನರಾ ಬ್ಯಾಂಕ್‌ನಿಂದ ಅಂಬೇಡ್ಕರ್ ವಿದ್ಯಾಜ್ಯೋತಿ ವಿದ್ಯಾರ್ಥಿ ವೇತನ ವಿತರಣೆ

**ಚಳ್ಳಕೆರೆ:** ನಗರದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಕೆನರಾ ಬ್ಯಾಂಕ್ ವತಿಯಿಂದ ಡಾ.ಅಂಬೇಡ್ಕರ್ ವಿದ್ಯಾಜ್ಯೋತಿ ವಿದ್ಯಾರ್ಥಿ ವೇತನವನ್ನು ವಿತರಣೆ ಮಾಡಲಾಯಿತು ಎಂದು ತ್ಯಾಗರಾಜ ನಗರ ಕೆನರಾ ಬ್ಯಾಂಕ್ ವ್ಯವಸ್ಥಾಪಕ ಆರ್. ವರಪ್ರಸಾದ್ ತಿಳಿಸಿದರು.



ಅವರು,ಈಬಗ್ಗೆಮಾಹಿತಿನೀಡಿ,ಗಾಂಧಿನಗರದ ಶಾರದಾ ಪ್ರಾಥಮಿಕ ಶಾಲೆ, ಹೆಗ್ಗೆರೆ ತಾಯಮ್ಮ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಹಾಗೂ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನದ ಚೆಕನ್ನು ವಿತರಣೆ ಮಾಡಲಾಯಿತು. ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಲಾಯಿತು. ಪ್ರಾಥಮಿಕ ಶಾಲಾ ಹಂತದ 5,6,7 ತರಗತಿ ಮಕ್ಕಳಿಗೆ ಮೂರು ಸಾವಿರ, ಪ್ರೌಢಶಾಲಾ ಹಂತದ 8,9,10ನೇ ತರಗತಿ ಮಕ್ಕಳಿಗೆ ಐದು ಸಾವಿರದಂತೆ ವಿದ್ಯಾರ್ಥಿವೇತನ ನೀಡಲಾಗಿದೆ ಎಂದರು.

ಬ್ಯಾಂಕ್ ಅಧಿಕಾರಿ ಎಂ.ರಾಜಶೇಕರ್, ಸಹಾಯಕ ತಿಪ್ಪೇಸ್ವಾಮಿ, ಹೆಗ್ಗೆರೆ ತಾಯಮ್ಮ ಶಾಲೆಯ ಶಿಕ್ಷಕರಾದ ಉಮಾ, ಪೂರ್ಣಿಮಾ, ಕುಸುಮಾ, ಜಮುನಾ, ನಾಗರತ್ನ ಮುಂತಾದವರು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

# ರಾಜ್ಯಪಾಲ ವಜಾ ಮಾಡಲು ಜಿಲ್ಲಾ ವಕೀಲರ ಒತ್ತಾಯ

» ಚಿತ್ರದುರ್ಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ದ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆ ತೀವ್ರ ಖಂಡನೀಯ. ಸಂವಿಧಾನ ಬಾಹಿರವಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ದ ಸುಮಾರು 30–40 ವರ್ಷಗಳ ಹಳೆಯ ಸಿವಿಲ್ ಸ್ವರೂಪದ ಪ್ರಕ್ರಿಯೆಗೆ ರಾಜ್ಯಪಾಲರು ಮುಖ್ಯಮಂತ್ರಿಗಳ ವಿರುದ್ಧ ದುರುದ್ದೇಶ ಪೂರ್ವಕವಾಗಿ ಪ್ರಾಸುಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರನ್ನು ವಜಾ ಮಾಡಲು ಚಿತ್ರದುರ್ಗ ಜಿಲ್ಲಾ ವಕೀಲರ ಬಳಗವು ಒತ್ತಾಯಿಸಿದೆ.



ಚಿತ್ರದುರ್ಗದಲ್ಲಿ ಇದರ ಬಗ್ಗೆ ಪ್ರತಿಭಟನೆಯನ್ನು ನಡೆಸಿದ ಚಿತ್ರದುರ್ಗ ಜಿಲ್ಲಾ ವಕೀಲರ ಬಳಗದ ಪದಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿ ಬಳಿ ರಾಜ್ಯಪಾಲರ ವಿರುದ್ಧ ಘೋಷಣೆಗಳನ್ನು ಕೂಗಿದರು. ರಾಜ್ಯಭವನ ರಾಜಕೀಯ ಭವನವಾಗಿ ಪರಿವರ್ತನೆಗೊಂಡು ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆ ಆಗಿರುವುದು ಸಂವಿಧಾನದ ಕಗ್ಗೊಲೆ. ಒಬ್ಬ ಹಿಂದುಳಿದ ವರ್ಗದ ನಾಯಕ ಜನಪರ ಆಡಳಿತ ನಡೆಸುತ್ತಿರುವುದನ್ನು ಅರಗಿಸಿಕೊಳ್ಳಲಾಗದೆ ಕೇಂದ್ರ ಬಿಜೆಪಿ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಭವನವನ್ನು ಉಪಯೋಗಿಸಿಕೊಂಡಿರುವುದು ಪ್ರಜಾಪ್ರಭುತ್ವದ ಕಗ್ಗೊಲೆ ಎಂದರು.

ಕರ್ನಾಟಕ ಸರ್ಕಾರವು ಮೂಡಾಹಗರಣವನ್ನು ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಿಂದ ತನಿಖೆ ನಡೆಸುತ್ತಿರುವಾಗಲೇ ರಾಜ್ಯಪಾಲರು ತರಾತುರಿಯಲ್ಲಿ ಕಾನೂನು ಬಾಹಿರವಾಗಿ ಪ್ರಾಸುಕ್ಯೂಷನ್‌ಗೆ ಅನುಮತಿ ನೀಡಿರುವುದರಿಂದ ಕೂಡಲೇ ಅವರನ್ನು ವಜಾ ಮಾಡಬೇಕು.ಕರ್ನಾಟಕದ ರಾಜ್ಯಪಾಲರು ಕರ್ನಾಟಕದ ಸ್ಥಿರ ಸರ್ಕಾರವನ್ನು ಅಸ್ಥಿರಗೊಳಿಸಲು ಕಿರುಕುಳ ನೀಡುತ್ತಿದ್ದಾರೆ. ಪಾಲರು ಮತ್ತು ಕೇಂದ್ರ ಸರ್ಕಾರ ರಾಜ್ಯ ಭವನವನ್ನು ಬಿಜೆಪಿಯ ಸ್ಥಳೀಯ ಕಚೇರಿಯನ್ನಾಗಿ ಮಾಡಿಕೊಂಡಿದ್ದಾರೆ. ಕೇಂದ್ರ ಸರ್ಕಾರವು ಸಂವಿಧಾನಿಕ ಸಂಸ್ಥೆಗಳಾದ ಐಟಿ, ಇಡಿ, ಸಿಬಿಐ ಮತ್ತು ರಾಜಭವನವನ್ನು ದುರ್ಬಳಕೆ ಮಾಡಿಕೊಂಡು ಸಂವಿಧಾನ ಬಾಹಿರ ಕೃತ್ಯದಲ್ಲಿ ತೊಡಗಿರುತ್ತದೆ. ರಾಜ್ಯಪಾಲರ ಮುಂದೆ ಪ್ರಾಸುಕ್ಯೂಷನ್‌ಗಾಗಿ ನೂರಾರು ದೂರುಗಳು ಬಾಕಿ ಇದ್ದರು, ಮುಖ್ಯಮಂತ್ರಿಗಳ ವಿರುದ್ಧ ತರಾತುರಿಯಲ್ಲಿ ಅನುಮತಿ ನೀಡಿರುವುದು ಸಂವಿಧಾನ ಬಾಹಿರ ಎಂದು ದೂರಿದರು.

ಕೇಂದ್ರ ಸರ್ಕಾರವು ರಾಜ್ಯದಲ್ಲಿನ ಚುನಾಯಿತ ಸರ್ಕಾರವನ್ನು ಅಸ್ಥಿರಗೊಳಿಸಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳುಗೆಡವಿ ರಾಜ್ಯದಲ್ಲಿ ಅಶಾಂತಿ ಉಂಟು ಮಾಡುವ ಪ್ರಯತ್ನ ಮಾಡುತ್ತಿದೆ. ಕರ್ನಾಟಕ ರಾಜ್ಯಪಾಲರ ಸಂವಿಧಾನ ಬಾಹಿರ ನಡೆಯ ಹಿಂದಿರುವ ಒಳಸಂಚು ಮತ್ತು ವಿಚ್ಛೆದ್ರಕಾರಿ ಶಕ್ತಿಗಳ ವಿರುದ್ಧ ಅವರಿಗೆ ಕಾನೂನು ಬಾಹಿರವಾದ ಸಲಹೆ ನೀಡಿದವರವಿರುದ್ಧಮತ್ತುಪ್ರಾಸುಕ್ಯೂಷನ್‌ಗೆ ಅನುಮತಿ ನೀಡಲು ಸಹಕರಿಸಿರುವವರ ವಿರುದ್ಧ ಸುಪ್ರಿಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಿಂದ ತನಿಖೆ ನಡೆಸಲು ಒತ್ತಾಯಿಸಲಾಯಿತು.ಕೇಂದ್ರಸರ್ಕಾರಮತ್ತು ರಾಜ್ಯಪಾಲರು ಕರ್ನಾಟಕ ಸರ್ಕಾರವನ್ನು ಅಸ್ಥಿರಗೊಳಿಸುತ್ತಿರುವ ಅಂಶವು ಮೇಲ್ನೋಟಕ್ಕೆ ಕಾಣುತ್ತಿರುವುದರಿಂದ ಈ ಹಿಂದೆಯು ಸಹ ಕೇಂದ್ರ ಸರ್ಕಾರವು ಸಂವಿಧಾನಿಕಸಂಸ್ಥೆಗಳನ್ನುದುರುಪಯೋಗ ಪಡಿಸಿಕೊಂಡು ಕೆಲ ಸರ್ಕಾರಗಳನ್ನು ಅಸ್ಥಿರಗೊಳಿಸಿರುವುದು ಇತಿಹಾಸದ ಪುಟಗಳಿಂದ ತಿಳಿಯಬಹುದು. ಸದರಿ ಪ್ರಕರಣ ಸುಮಾರು 30–40 ವರ್ಷಗಳ ಸಿವಿಲ್ ಸ್ವರೂಪದ ದೂರಾಗಿದ್ದು, ಈ ದೂರನ್ನು ಇಟ್ಟುಕೊಂಡು ಒಂದು ಚುನಾಯಿತ ಸರ್ಕಾರದ ಮೇಲೆ ದಬ್ಬಾಳಿಕೆ ನಡೆಸುವ ರಾಜ್ಯಪಾಲರನ್ನು ಈ ಕೂಡಲೇ ವಜಾ ಮಾಡುವಂತೆ ಚಿತ್ರದುರ್ಗ ಜಿಲ್ಲಾ ವಕೀಲರ ಬಳಗವು ರಾಷ್ಟ್ರಪತಿಗಳಲ್ಲಿ ಮನವಿ ಮಾಡಿದೆ.

## ಫಾಸ್ಟ್ ನ್ಯೂಸ್

### ಡಿ. ದೇವರಾಜ ಅರಸು 109ನೇ ಜನ್ಮ ದಿನಾಚರಣೆ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಡಿ..ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಮುದಾಯ ಭವನ, ಇಲ್ಲಿ ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಹಿಂದುಳಿದ ವರ್ಗಗಳ ನಾಯಕ, ಸಾಮಾಜಿಕ ಹರಿಕಾರ ಡಿ. ದೇವರಾಜ ಅರಸುರವರ 109ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಚಿದಾನಂದ. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್,ಡಾ. ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ಭಾಗವಹಿಸುವರು.

### ಇಂದು ವಿದ್ಯುತ್ ವ್ಯತ್ಯಯ

» ಹೊಸದುರ್ಗ

ರಸ್ತೆ ಅಗಲೀಕರಣ ಮತ್ತು ಒಳಚರಂಡಿ ನಿರ್ವಹಣಾ ಕಾಮಗಾರಿ ನಿರ್ವಹಿಸುವುದರಿಂದ ಸೋಮವಾರ (ಇಂದು) ಬೆಳಿಗ್ಗೆ 10 ರಿಂದ ಸಂಜೆ 6 ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಮಧುರೆ 220/66/11 ಕೆ.ವಿ. ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ತಾಲ್ಲೂಕಿನ ಕಸಬಾ ಹೋಬಳಿಯ ಮಧುರೆ, ದೇವಿಗೆರೆ ಹಾಗೂ ಹೆಬ್ಬಳ್ಳಿ ಪಂಚಾಯಿತಿಯ ಎಲ್ಲಾ ಗ್ರಾಮಗಳು ಮತ್ತು ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭಗೀರಥ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

» ಹೊಸದುರ್ಗ

ಭಗೀರಥ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘ, ತಾಲ್ಲೂಕು ಉಪ್ಪಾರ ಸಂಘ, ಭಗೀರಥ ಪತ್ತಿನ ಸಹಕಾರ ಸಂಘ, ಸಗರ ನಿವೃತ್ತಿ ನೌಕರರ ಸಂಘದ ವತಿಯಿಂದ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಶೇ. 80 ರಷ್ಟು ಅಂಕಗಳಿಸಿದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 25 ಕೊನೆಯ ದಿನವಾಗಿದೆ ಎಂದು ಭಗೀರಥ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಆರ್. ಲಕ್ಷ್ಮಯ್ಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
ಅರ್ಹ ವಿದ್ಯಾರ್ಥಿಗಳು ಭಾವಚಿತ್ರ, ಅಂಕಪಟ್ಟಿ ನಕಲು, ಆಧಾರ್ ಕಾರ್ಡ್ ಸೇರಿದಂತೆ ಇತರೆ ದಾಖಲೆಗಳೊಂದಿಗೆ ಉಪ್ಪಾರ ಹಾಸ್ಟೆಲ್ ಕಟ್ಟಡ, ಗಾಂಧಿ ವೃತ್ತ, ಹೊಸದುರ್ಗ ಇಲ್ಲಿ ಅರ್ಜಿ ಸಲ್ಲಿಸಬಹುದು.ಹೆಚ್ಚಿನಮಾಹಿತಿಗಾಗಿ9611072199, 9980197415 ಕ್ಕೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಲಾಗಿದೆ.

### ಕೃಷ್ಣ ವೃತ್ತದಲ್ಲಿ ಆ.26 ರಂದು ಕೃಷ್ಣಜನ್ಮಾಷ್ಟಮಿ

» ಚಿತ್ರದುರ್ಗ

ಹೊಳಲ್ಕೆರೆ ರಸ್ತೆಯಲ್ಲಿರುವ ಶ್ರೀಕೃಷ್ಣ ಯಾದವಾನಂದ ಮಠದ ಹತ್ತಿರವಿರುವ ಕೃಷ್ಣ ವೃತ್ತದಲ್ಲಿ ಆ.26 ರಂದು ಕೃಷ್ಣಜನ್ಮಾಷ್ಟಮಿ ನಡೆಯಲಿದೆ ಎಂದು ನಗರಸಭೆ ಮಾಜಿ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ ತಿಳಿಸಿದರು.ಪತ್ರಕರ್ತರ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 25 ರಂದು ಬೆಳಿಗ್ಗೆ 11 ಕ್ಕೆ ಕೃಷ್ಣವೃತ್ತದಿಂದ ಬೈಕ್ ರ್ಯಾಲಿ ಹೊರಟು ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ. 26 ರಂದು ಬೆಳಿಗ್ಗೆ ಐದು ಗಂಟೆಯಿಂದಲೆ ಪೂಜೆ ವಿವಿಧ ಸಾಂಸ್ಕೃತಿಕ ಹಾಗೂ ಮನೋರಂಜನಾ ಕಾರ್ಯಕ್ರಮಗಳು ನಡೆಯಲಿದ್ದು, ಸ್ಥಳೀಯ ಶಾಸಕರು, ಸಂಸದರು, ವಿಧಾನಪರಿಷತ್ ಸದಸ್ಯರು, ಯಾದವ ಸಮಾಜದ ಮುಖಂಡರುಗಳು ಹಾಗೂ ಜಿಲ್ಲಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ. ಕೇವಲ ಯಾದವ ಜನಾಂಗವಷ್ಟೆ ಅಲ್ಲ ಎಲ್ಲಾ ಜಾತಿಯವರು ಶ್ರೀಕೃಷ್ಣ ಜನ್ಮಾಷ್ಟಮಿಯಲ್ಲಿ ಭಾಗವಹಿಸಿ ಜಯಂತಿಯನ್ನು ಯಶಸ್ವಿಗೊಳಿಸುವಂತೆ ಸಿ.ಟಿ.ಕೃಷ್ಣಮೂರ್ತಿ ಮನವಿ ಮಾಡಿದರು.
ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣಾ ಸಮಿತಿ ಅಧ್ಯಕ್ಷ ಕದರಪ್ಪ, ಆರ್.ಶಿವಣ್ಣ, ಗರಡಿ ತಿಮ್ಮಣ್ಣ, ಮೈಲಾರಪ್ಪ, ನಗರಸಭೆ ಮಾಜಿ ಸದಸ್ಯ ಡಿ.ಸಿ.ಸುರೇಶ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಅಪಘಾತ ವಲಯ, ಅವೈಜ್ಞಾನಿಕ ರಸ್ತೆ ನಿರ್ಮಾಣ ಸರಿಪಡಿಸಿ; ಅಪಘಾತ ತಗ್ಗಿಸಲು ಕ್ರಮ ವಹಿಸಿ: ಡಿಸಿ

» ದಾವಣಗೆರೆ

ಜಿಲ್ಲೆಯಲ್ಲಿ ರಸ್ತೆ ಅಪಘಾತ ಪ್ರಕರಣಗಳಿಂದ ಅನೇಕ ಸಾವು-ನೋವು ಉಂಟಾಗುತ್ತಿದೆ. ಅವುಗಳ ನಿಯಂತ್ರಣಕ್ಕೆ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಅಗತ್ಯವಿರುವ ರಸ್ತೆ ಅಭಿವೃದ್ಧಿಪಡಿಸಿ ಅಪಘಾತ ಪ್ರಕರಣ ತಗ್ಗಿಸಲು ಕ್ರಮ ವಹಿಸಲು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಮಾತನಾಡಿದರು. ರಸ್ತೆ ಅಪಘಾತ ಪ್ರಕರಣಗಳು ಪ್ರತಿ ವರ್ಷವೂ ಹೆಚ್ಚುತ್ತಿದೆ, ಇದರಲ್ಲಿ ಹೆಚ್ಚಾಗಿ ಶೇ.90 ರಷ್ಟು ಪ್ರಕರಣಗಳಲ್ಲಿ ಅತಿವೇಗದ ವಾಹನ ಚಾಲನೆ, ಅಜಾಗರೂಕತೆಯಿಂದ ಅಪಘಾತ ಉಂಟಾಗಿದೆ. ಕೆಲವು ಕಡೆ ಅವೈಜ್ಞಾನಿಕ ರಸ್ತೆ ಕಾಮಗಾರಿಗಳಿಂದಲೂ ಅಪಘಾತಗಳಾಗಿವೆ ಎಂದರು.

ಪೊಲೀಸ್ ಇಲಾಖೆಯು ಅಪಘಾತ ಸಂಭವಿಸುವ ಬ್ಲ್ಯಾಕ್ ಸ್ಪಾಟ್‌ಗಳನ್ನು ಗುರುತಿಸಿದೆ. ಕಳೆದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಆ ಸ್ಥಳಗಳ ರಸ್ತೆ ಸುಧಾರಣೆಗೆ ಕ್ರಮ ಕೈಗೊಳ್ಳಲು ರಾಷ್ಟ್ರೀಯ ಹೆದ್ದಾರಿ ಹಾಗೂ ಇತರ ಇಲಾಖೆಗಳಿಗೆ ಸೂಚಿಸಲಾಗಿತ್ತು. ಅವುಗಳಲ್ಲಿ ಬಹುತೇಕ ಕಾಮಗಾರಿಗಳನ್ನ ಕೈಗೊಳ್ಳಲಾಗಿದೆ ಎಂದು ಇಲಾಖೆ ಅಧಿಕಾರಿಗಳು ತಿಳಿಸಿದ್ದು



ಪೊಲೀಸ್ ಇಲಾಖೆ ಹಾಗೂ ಹೆದ್ದಾರಿ ವಿಭಾಗದ ಅಧಿಕಾರಿಗಳು ಜಂಟಿ ಸರ್ವೆ ನಡೆಸಿ ಶೀಘ್ರವಾಗಿ ವರದಿ ನೀಡಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ರಸ್ತೆ ಅಪಘಾತಗಳನ್ನು ಮತ್ತು ಅದರಿಂದ ಉಂಟಾಗುವ ಪ್ರಾಣಹಾನಿ ಹಾಗೂ ಗಾಯಾಳುಗಳ ಪ್ರಮಾಣ ತಗ್ಗಿಸುವ ಅಗತ್ಯವಿದೆ. ಇದಕ್ಕಾಗಿ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ವ್ಯವಸ್ಥಿತವಾದ ಸಮಗ್ರ ಕ್ರಿಯಾ ಯೋಜನೆ ಸಿದ್ಧಪಡಿಸುವಂತೆ ಸೂಚಿಸಿದರು. ಜಿಲ್ಲೆಯಲ್ಲಿ ಭಾರಿ ಮಳೆ ಬರುತ್ತಿದ್ದು ರಸ್ತೆಗಳಲ್ಲಿ ಗುಂಡಿ ಬಿದ್ದಿವೆ ಮತ್ತು ಕೆಲವೆಡೆ ರಸ್ತೆ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದೆ. ಇಂತಹ ಸ್ಥಳಗಳಲ್ಲಿ ನಿಧಾನವಾಗಿ ಹಾಗೂ ಜಾಗರೂಕತೆಯಿಂದ ವಾಹನ ಚಾಲನೆ ಮಾಡಲು ಈ ಬಗ್ಗೆ ಸೈನ್ ಬೋರ್ಡ್ ಅಳವಡಿಸಬೇಕು, ಇಲ್ಲದಿದ್ದಲ್ಲಿ ಅಪಘಾತ ಸಂಭವಿಸಿ ಜೀವಹಾನಿಯಾಗಬಹುದು ಎಂದು ಎಚ್ಚರಿಕೆ ನೀಡಿದರು.

ಜಿಲ್ಲೆಯಾದ್ಯಂತ ಮುಖ್ಯ ರಸ್ತೆಗಳಲ್ಲಿ ಅಳವಡಿಸಲಾದ ಅವೈಜ್ಞಾನಿಕ ವೇಗತಡೆ (ಹಂಪ್ಸ್)ಗಳನ್ನು ಸರಿಪಡಿಸುವ್ವದು, ದಾವಣಗೆರೆ ಜಿಲ್ಲೆಯಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ. ರಾಜ್ಯ ಹೆದ್ದಾರಿಗಳಲ್ಲಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳಲ್ಲಿ ಸಂಬಂಧಪಟ್ಟ ಇಲಾಖೆಯ ಹಾಗೂ ಪೊಲೀಸ್ ಇಲಾಖೆಯ ಗಮನಕ್ಕೆ ಬಾರದೇ ಅಳವಡಿಸಲಾದ ಅವೈಜ್ಞಾನಿಕ ವೇಗ ತಡೆಗಳಿಂದ ಅಪಘಾತಗಳು ಸಂಭವಿಸುತ್ತಿರುವ ಹಿನ್ನಲೆಯಲ್ಲಿ ಅಂತಹ ಸ್ಥಳಗಳನ್ನುಗುರುತಿಸಿಕೂಡಲೆತೆರವುಗೊಳಿಸಿ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಹಾಗೂ ಆಯಾ ಪೊಲೀಸ್ ಠಾಣೆಯ ಅಧಿಕಾರಿಗಳು ಜಂಟಿ ಪರಿವೀಕ್ಷಣೆಯನ್ನು ಮಾಡಿ ಅವಶ್ಯಕತೆ ಇದ್ದರೆ ವೈಜ್ಞಾನಿಕ ವೇಗತಡೆಗಳನ್ನು ಅಳವಡಿಸಿ ಸುರಕ್ಷತಾ ಕ್ರಮಗಳನ್ನು ಅನುಸರಿಸಬೇಕು. ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಸಂಬಂಧಪಟ್ಟ ಆಯಾ ಇಲಾಖೆಯ ಅಧಿಕಾರಿಗಳು ವೈಜ್ಞಾನಿಕ ವೇಗತಡೆಗಳಿಗೆ ಥರ್ಮೋಪ್ಲಾಸ್ಟಿಕ್ ಬಣ್ಣವನ್ನು ಅಳವಡಿಸುವುದರ ಜೊತೆಗೆ ವೇಗ ತಡೆ ಗೋಚರಿಸುವಂತೆ ರೋಡ್ ಸ್ಟಡ್‌ಗಳನ್ನು ಅಳವಡಿಸಿ ಮುಂಜಾಗ್ರತೆಗಾಗಿ ಸೂಚನಾ ಫಲಕಗಳನ್ನು ಅಳವಡಿಸಲು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಮಾತನಾಡಿ ನಗರದಲ್ಲಿ ಜಲಸಿರಿ ಯೋಜನೆಯ ಕಾಮಗಾರಿಗಳು ನಡೆಯುತ್ತಿರುವ ಹಿನ್ನಲೆಯಲ್ಲಿ ಗುತ್ತಿಗೆದಾರರು ಕಾಮಗಾರಿ ಪೂರ್ಣಗೊಂಡ ಸ್ಥಳಗಳಲ್ಲಿ ಮೊದಲಿನಂತೆ ರಸ್ತೆಯನ್ನು ಮಾಡಬೇಕು.

ರಾಷ್ಟ್ರೀಯ ಹೆದ್ದಾರಿಯ ಬೈಪಾಸ್‌ನಲ್ಲಿ ಎರಡೂ ಬದಿ ಸರ್ವೀಸ್ ರಸ್ತೆಯ ಕಾಮಗಾರಿಯನ್ನು ವೇಗವಾಗಿ ಪೂರ್ಣಗೊಳಿಸಬೇಕು. ವಿದ್ಯಾನಗರ ಲಾಸ್ಟ್ ಬಸ್ ಸ್ಟಾಪ್ ನಿಂದ ಕರ್ನಾಟಕ ಹೌಸಿಂಗ್ ಬೋರ್ಡ್ ಕಾಲೋನಿಯವರೆಗೆ ಪಾಲಿಕೆ ವ್ಯಾಪ್ತಿಯಲ್ಲಿನ ಪ್ರಮುಖ ರಸ್ತೆಗಳಲ್ಲಿ ಬೀದಿ ದೀಪಗಳು ಕಾರ್ಯಾರಂಭ ಮಾಡದೇ ಇರುವ ಕಾರಣ ಪಾದಚಾರಿಗಳು ರಸ್ತೆ ದಾಟುವಾಗ ಲಘು ಹಾಗೂ ಮಾರಣಾಂತಿಕ ಅಪಘಾತಗಳು ಸಂಭವಿಸುತ್ತಿದೆ ಎಂದರು.

ಈಗಾಗಲೇ ರಸ್ತೆ ಸುರಕ್ಷತಾ ಮೇಲುಸ್ತುವಾರಿ ಹಾಗೂ ನೇತೃತ್ವದ ಅಂಗವಾಗಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ರಚಿಸಲಾಗಿದ್ದು, ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಲಾಗುವುದು ಎಂದರು.

ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ.ಸಂತೋಷ್, ಪಾಲಿಕೆ ಆಯುಕ್ತರಾದ ರೇಣುಕಾ, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ನರೇಂದ್ರಬಾಬು, ಡಿಯುಡಿಸಿ ಯೋಜನಾ ನಿರ್ದೇಶಕ ಡಾ.ಎನ್.ಮಹಾಂತೇಶ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಆಯುಷ್ ಪದ್ಧತಿ ಅಳವಡಿಕೆಗೆ ಜಾಗೃತಿ

» ದಾವಣಗೆರೆ

ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ ಜಿಲ್ಲಾ ಆಯುಷ್ ಇಲಾಖೆ ಮತ್ತು ಶಾಲಾ ಶಿಕ್ಷಣ ಇಲಾಖೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಹಳೆಕಡ್ಲೇಬಾಳು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಆಯುರ್ವಿದ್ಯಾ ಶಾಲಾ ಮಕ್ಕಳಿಗೆ ಆಯುಷ್ ಪದ್ಧತಿಗಳ ಮೂಲಕ ಆರೋಗ್ಯ ಜೀವನ ಶೈಲಿಯ ಶಿಕ್ಷಣ ಉದ್ಘಾಟನೆ ಕಾರ್ಯಕ್ರಮ ನಡೆಯಿತು.

ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಯೋಗೇಂದ್ರಕುಮಾರ್. ಬಿ.ಯು. ಅವರು ಆಯುರ್ವಿದ್ಯಾಕ್ಕೆ ಚಾಲನೆ ನೀಡಿ ಮಾತನಾಡಿದರು. ರಾಜ್ಯದ 5 ಜಿಲ್ಲೆಗಳಿಗೆ ಈ ಕಾರ್ಯಕ್ರಮ ನಿಗದಿಪಡಿಸಿದ್ದು ಜಿಲ್ಲೆಯ ಆಯ್ದ 60 ಶಾಲೆಗಳಲ್ಲಿ ಆಯುರ್ವಿದ್ಯಾವನ್ನು ಮಕ್ಕಳಲ್ಲಿ ಜಾಗೃತಿ ಮೂಡಿಸಲು ಆಯೋಜಿಸಲಾಗುವುದು. ಮತ್ತು ಆಯುಷ್ ವೈದ್ಯರು ಮತ್ತು ಆಯುರ್ವಿದ್ಯಾ ಕಾರ್ಯಕ್ರಮದ ವೈದ್ಯರನ್ನೊಳಗೊಂಡ ತಂಡವು ಶಾಲೆಗಳಿಗೆ ಭೇಟಿ ನೀಡಿ ಆಯುಷ್ ವೈದ್ಯ ಪದ್ಧತಿಗಳ ಬಗ್ಗೆ ಜಾಗೃತಿ ಮೂಡಿಸಿ ನಂತರ ಕರಪತ್ರ ವಿತರಣೆ ಹಾಗೂ ಔಷಧಿ ಸಸ್ಯಗಳ



ವಿತರಣೆಯನ್ನು ನೆರವೇರಿಸಲಾಗುವುದು ಎಂದು ತಿಳಿಸಿದರು.

ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಕಾರ್ಯಕ್ರಮವನ್ನು ಆಯೋಜಿಸಿ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ನೀಡಲಾಗುವುದೆಂದು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಕಿಶೋರಿ ಕೆ.ಎಸ್. ರವರು ಔಷಧಿ ಸಸ್ಯಗಳ ಮಾಹಿತಿ ನೀಡಿದರು.

ಆಯುರ್ವಿದ್ಯಾ ವೈದ್ಯರಾದ ಡಾ.ವಿನುತಾ ಸಿ.ಕೆ ರವರು ವಿದ್ಯಾರ್ಥಿಗಳ ದಿನಚರಿ, ಆಹಾರ ಮತ್ತು ಆರೋಗ್ಯದ ವಿಷಯ ಕುರಿತು ಉಪನ್ಯಾಸ ನೀಡಿದರು. ನಂತರ ರಸಪ್ರಶ್ನೆ ಕಾರ್ಯಕ್ರಮ ಆಯೋಜಿಸಿ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ವಿತರಿಸಿ ಮಕ್ಕಳಲ್ಲಿ ಆಯುಷ್ ವೈದ್ಯ ಪದ್ಧತಿಗಳ ಬಗ್ಗೆ ಹೆಚ್ಚಿನ ಆಸಕ್ತಿ ಮೂಡಿಸಲಾಯಿತು. ಶಾಲೆಯ ಶಿಕ್ಷಕರಾದ ಸುರೇಶ್ ಜೆ. ಅಧ್ಯಕ್ಷತೆ ವಹಿಸಿದ್ದರು. ಡಾ. ಸಿದ್ದೇಶ್ ಈ. ಬಿಸನಳ್ಳಿ ರವರು ಆಯುಷ್ ಪರಿಚಯ ಕುರಿತು ತಿಳಿಸಿದರು.



**ಹೊಸದುರ್ಗ ತಾಲೂಕಿನ ಡಿ.ಬಿ.ಕೆರೆಯ ಸ.ಹಿ.ಪ್ರಾ.ಶಾಲೆಯಲ್ಲಿ ಕಂಚೀನಗರ ಗ್ರಾಮದ ಜನಸೇವ ಟ್ರಸ್ಟ್ ವತಿಯಿಂದ ಅಂಗವಿಕಲರಿಗೆ ವಾಕರ್ ವಿತರಣೆ ಮಾಡಲಾಯಿತು.**

## ನಮ್ಮ ದೇಶದ ಮಿಲಿಟರಿ ಪಡೆ ನಂ. 1

» ದಾವಣಗೆರೆ

ನಮ್ಮ ದೇಶದ ಗಡಿ ಭದ್ರವಾಗಿರುವುದರಿಂದ ದೇಶದ ಒಳಗಡೆ ಇರುವ ನಾವೆಲ್ಲರೂ ಇಲ್ಲಿ ಶಾಂತವಾಗಿ ನೆಮ್ಮದಿಯುತ ಜೀವನ ಸಾಗಿಸುತ್ತದ್ದೇವೆ ಎಂದು ನಿವೃತ್ತ ಯೋಧರು ಮತ್ತು ನಿವೃತ್ತ ಪೋಲಿಸ್ ಅಧಿಕಾರಿ ಎಚ್.ಬಸವರಾಜಪ್ಪ ಹೇಳಿದರು. ನಗರದ ಪಿ.ಜೆ.ಬಡಾವಣೆಯಲ್ಲಿರುವ



ಈಶ್ವರಮ್ಮ ಶಾಲೆಯಲ್ಲಿ 78 ನೇ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಈಗಿನ ಯುವಕರು ಸಿನಿಮಾ ನಟರನ್ನು ಹೀರೊಗಳೆಂದು ಅವರನ್ನು ಅನುಸರಿಸುತ್ತಾರೆ. ಅವರು ರೀಲ್ ಹೀರೊಗಳು. ನಿಜವಾದ ರಿಯಲ್ ಹೀರೊಗಳೆಂದರೆ ನಮ್ಮ ಸೈನಿಕರು. ನಮ್ಮ ಸೈನಿಕರಿಗೆ ಗೌರವವನ್ನು ಕೊಡಬೇಕು. ಸೈನ್ಯದಲ್ಲಿ ಹನ್ನೆರಡು ತಿಂಗಳು ತರಬೇತಿ ಕೊಟ್ಟು ಸೈನ್ಯಕ್ಕೆ ಕಳುಹಿಸುತ್ತಾರೆ. ಅಲ್ಲಿ ಗಡಿಗಳಲ್ಲಿ ಹೋರಾಡಿ ಪ್ರಾಣವನ್ನು ಕೊಡಬೇಕಾಗಿ ಬಂದರೂ ಸಿದ್ದರಾಗಿರಬೇಕಾಗುತ್ತದೆ, ಬುಲೆಟ್ ಫ್ರೂಫ್ ಮತ್ತು ಹೆಲ್ಮೆಟ್ ಗಳಿಂದ ನಮ್ಮ ಜೀವ ಉಳಿದಿದೆ ಎಂದರು.ಶಾಲಾ ಪ್ರಾಂಶುಪಾಲ ಕೆ.ಎಸ್.ಪ್ರಭುಕುಮಾರ್ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಇಡೀ ದೇಶವೇ ಬಹಳ ಸಡಗರ ಸಂಭ್ರಮದಿಂದ ಸ್ವಾತಂತ್ರ್ಯೋತ್ಸವವನ್ನು ಆಚರಿಸುತ್ತಿದೆ. ನಮ್ಮ ದೇಶ ಸ್ವಾತಂತ್ರ ಪಡೆಯಲು ಅನೇಕ ಮಹನೀಯರು ಪ್ರಾಣಾರ್ಪಣೆ ಮಾಡಿದ್ದಾರೆ.

ಭಾರತವನ್ನು ವಿಶ್ವ ಗುರು ಎಂದು ಹೇಳಲಾಗುತ್ತದೆ. ವಿಶ್ವಗುರುವಾಗಬೇಕಾದರೆ ಭಾರತದ ಸ್ವಾತಂತ್ರ್ಯ ವೀರರ ತ್ಯಾಗ, ಬಲಿದಾನ ಎಂತಹುದು ಎಂಬುದು ತಿಳಿಯುತ್ತದೆ ಎಂದರು.ಇಂದಿನ ಯುವ ಪೀಳಿಗೆಯಲ್ಲಿ ದೇಶಭಕ್ತಿ ಕಡಿಮೆಯಾಗುತ್ತಿರುವುದು ವಿಶಾದನೀಯ. ನಮ್ಮ ದೇಶವನ್ನು 200 ವರ್ಷಗಳ ಕಾಲ ಬ್ರಿಟಿಷರು ಕೊಳ್ಳೆ ಹೊಡೆದಿದ್ದರೂ ಕೂಡ ನಮ್ಮ ದೇಶ ಸಂಪದ್ಭರಿತವಾಗಿದೆ. ನಮ್ಮ ದೇಶದ ಭದ್ರತೆಯನ್ನು ಸಂಸ್ಕೃತಿಯನ್ನು ಏಕತೆಯನ್ನು ನಾವು ಕಾಪಾಡಿಕೊಳ್ಳಬೇಕು. ಸ್ವಾತಂತ್ರ್ಯದ ಜವಾಬ್ದಾರಿಯನ್ನು ನಾವು ತಿಳಿಯಬೇಕು ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.ಶಾಲೆಯ ನರ್ಸರಿ ಮತ್ತು ಕಿರಿಯ ಪ್ರಾಥಮಿಕ ವಿಭಾಗದ ವಿದ್ಯಾರ್ಥಿಗಳು ಸ್ವಾತಂತ್ರ ಹೋರಾಟಗಾರರ ವೇಷಭೂಷಣ ಧರಿಸಿ ಹಾಗೂ ಹಿರಿಯ ಪ್ರಾಥಮಿಕ & ಪ್ರೌಢ ಶಾಲಾ ವಿದ್ಯಾರ್ಥಿಗಳು ದೇಶಪ್ರೇಮ ಬಿಂಬಿಸುವ ದೇಶಭಕ್ತಿಗೀತೆಗಳು ಮತ್ತು ರಾಷ್ಟ್ರ ಪ್ರೇಮಭರಿತ ನೃತ್ಯ ಪ್ರದರ್ಶನ ನೀಡಿದರು.

**ಪ್ರಮುಖ ಸುದ್ದಿ**

# ಹಿಂದುಳಿದ ಮಠಗಳ ಕಡೆ ತಿರುಗಿ ನೋಡದ ಸಿದ್ದರಾಮಯ್ಯ

» ಚಿತ್ರದುರ್ಗ

ಸಂವಿಧಾನಬದ್ಧವಾಗಿ ಸಿಗಬೇಕಾದ ಹಕ್ಕುಗಳನ್ನು ಪಡೆಯುವುದಕ್ಕಾಗಿ ಮುಂದಿನ ವರ್ಷ ದೊಡ್ಡ ಮಟ್ಟದ ಸಮಾವೇಶ ನಡೆಸಲಾಗುವುದೆಂದು ಅತಿ ಹಿಂದುಳಿದ ಮಠಾಧೀಶರ ಮಹಾಸಭಾ ಸಂಸ್ಥಾಪಕ ರಾಜ್ಯಾಧ್ಯಕ್ಷ ಪ್ರಣವಾನಂದ ಸ್ವಾಮೀಜಿ ತಿಳಿಸಿದರು.

ತ.ರಾ.ಸು.ರಂಗಮಂದಿರದಲ್ಲಿ ಭಾನುವಾರ ನಡೆದ ಪೂರ್ವಭಾವಿ ಸಭೆಯ ಸಾನಿಧ್ಯ ವಹಿಸಿ ಮಾತನಾಡಿದರು.

ಅಖಿಲ ಭಾರತ ಕಾಂಗ್ರೆಸ್ ವರ್ಕಿಂಗ್ ಕಮಿಟಿ ಸದಸ್ಯ ಹಾಗೂ ಎಂ.ಎಲ್.ಸಿ. ಬಿ.ಕೆ.ಹರಿಪ್ರಸಾದ್ ನೇತೃತ್ವದಲ್ಲಿ ಹಿಂದುಳಿದ ಮಠಾಧೀಶರೆಲ್ಲಾ ಸೇರಿಕೊಂಡು ಬೃಹತ್ ಸಮಾವೇಶ ನಡೆಸಿ ನಮ್ಮ ಹಕ್ಕುಗಳಿಗಾಗಿ ಸರ್ಕಾರವನ್ನು ಒತ್ತಾಯಿಸಲಾಗುವುದು. ನಾವು ಯಾವ ಪಕ್ಷದ, ಜಾತಿ ಧರ್ಮದ ವಿರುದ್ಧವಾಗಿ ಸಮಾವೇಶ ಮಾಡುವುದಿಲ್ಲ. ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರ ಕನಸು



ನನಸಾಗಬೇಕಾದರೆ ಅತಿ ಹಿಂದುಳಿದ ಮಠಗಳು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಲೇಬೇಕು. ಸಮಾವೇಶಕ್ಕೆ ಸಂಬಂಧಿಸಿದಂತೆ ಪ್ರತಿ ಮನೆ ಮನೆಗೆ ಹೋಗಿ ಸಂವಿಧಾನದ ಬಗ್ಗೆ ಜನರಿಗೆ ಅರಿವು ಮೂಡಿಸುತ್ತೇವೆ. ಮುಂದಿನ ಪೀಳಿಗೆಯ ಭವಿಷ್ಯ ಚೆನ್ನಾಗಿರಬೇಕಾದರೆ ನಾವು ಈಗಿನಿಂದಲೇ ಹೋರಾಟ ಮಾಡಬೇಕು. ಇದಕ್ಕೆ ಅತಿ ಹಿಂದುಳಿದ ವರ್ಗಗಳ ಬೆಂಬಲ ಬೇಕೆಂದು ಕೋರಿದರು.

ಅಹಿಂದಾ ನಾಯಕ ಸಾಮಾಜಿಕ ನ್ಯಾಯದ ಹರಿಕಾರ ಎಂದು ಹೇಳಿಕೊಳ್ಳುತ್ತಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರಬಲ ಮಠಗಳಿಗೆ ಅನುದಾನ ನೀಡುತ್ತಿದ್ದಾರೆಯೇ ವಿನಃ ಅತಿ ಹಿಂದುಳಿದ ಮಠಗಳ ಕಡೆ ತಿರುಗಿ ನೋಡಿತ್ತಿಲ್ಲ. ಎಲ್ಲಾ ಪಕ್ಷಗಳು ನಮ್ಮನ್ನು ನಿರ್ಲಕ್ಷಿಸುತ್ತಿವೆ. ಹಾಗಾಗಿ ಬೃಹತ್ ಸಮಾವೇಶ ನಡೆಸುವುದು ಅನಿವಾರ್ಯ ಎಂದು ಹೇಳಿದರು.ದೇವಸ್ಥಾನಗಳಿಗೆ ಹೋಗಿ ಪೂಜೆ ಮಾಡುವ ಬದಲು ಸಂವಿಧಾನವನ್ನು ಪೂಜಿಸಿ. ಹಳ್ಳಿಗಳಲ್ಲಿ ಈಗಲೂ ಅಸ್ಪೃಶ್ಯತೆಯಿದೆ. ಡಾ.ಬಿ.ಆರ್. ಅಂಬೇಡ್ಕರ್‌ರವರಆಶಯಇನ್ನುಈಡೇರಿಲ್ಲ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಮಿತಿಗಳನ್ನು ರಚಿಸಿ ಅತಿ ಹಿಂದುಳಿದ ಜನಾಂಗವನ್ನು ಜಾಗೃತಿಗೊಳಿಸಲಾಗುವುದೆಂದರು.

ಅತಿ ಹಿಂದುಳಿದ ಮಠಾಧೀಶರ ಮಹಾಸಭಾ ಸಂಸ್ಥಾಪಕ ರಾಷ್ಟ್ರೀಯ ಅಧ್ಯಕ್ಷರಾದ ಬಸವನಾಗಿದೇವಸ್ವಾಮಿ ಮಾತನಾಡಿ ಅತಿ ಹಿಂದುಳಿದ ಜನಾಂಗ ಸಂವಿಧಾನದ ಜೊತೆ ಸಾಗುತ್ತ ಬಡತನ ನಿರ್ಮೂಲನೆ ಮಾಡಿಕೊಂಡು ಸಮಾಜದ ಮುಖ್ಯ ವಾಹಿನಿಗೆ ಬರಬೇಕಾಗಿದೆ. ಇಲ್ಲದಿದ್ದರೆ ಇನ್ನು ಬಡತನ ರೇಖೆಗಿಂತ ಕೆಳಗಿರಬೇಕಾಗುತ್ತದೆ ಎಂದು ಎಚ್ಚರಿಸಿದರು.

ಅಜ್ಞಾನ, ತಪ್ಪು ತಿಳುವಳಿಕೆ, ಮೂಢನಂಬಿಕೆಯಿಂದ ಅತಿ ಹಿಂದುಳಿದ ಜನಾಂಗ ಸಂವಿಧಾನದಿಂದ ದೂರ ಉಳಿದಿರುವುದರಿಂದ ಬಡತನ ಜಾಸ್ತಿಯಾಗುತ್ತಿದೆ. ಸರ್ಕಾರದಿಂದ ಸಿಗಬೇಕಾದ ನ್ಯಾಯವಾದ ಹಕ್ಕುಗಳನ್ನು ಪಡೆಯಬೇಕಾಗಿರುವುದರಿಂದ 2025 ರಲ್ಲಿ ಬೃಹತ್ ಸಮಾವೇಶ ನಡೆಸುವ ಸಂಬಂಧ ಸ್ಥಳ ಮತ್ತು ದಿನಾಂಕವನ್ನು ನಿಗಧಿಪಡಿಸಲಾಗುವುದು. ರಾಜ್ಯಾದ್ಯಂತ ಹಿಂದುಳಿದವರು ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶದಲ್ಲಿ ಪಾಲ್ಗೊಂಡು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಶಕ್ತಿ ಪ್ರದರ್ಶಿಸಬೇಕೆಂದು ವಿನಂತಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T